ಸಂಪುಟ : 11 ಸಂಚಿಕೆ: 08 ಪುಟ : 4+2 ಬೆಲೆ: 3.00 ಮಂಗಳವಾರ ಫೆಬ್ರವರಿ 03 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 08 Pages : 4+2 Price : 3.00 Tuesday February 03 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ರಾಜ್ಯ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಾಕ್ಷರಿ

# ನೌಕರರು ಒತ್ತಡದಿಂದ ಆರೋಗ್ಯ ಕೆಡಿಸಿಕೊಳ್ಳುತ್ತಿದ್ದಾರೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರಿ ನೌಕರರ ಮೇಲೆ ನಡೆಯುವ ಹಲ್ಲೆ, ದೌರ್ಜನ್ಯ ಪ್ರಕರಣಗಳಿಗೆ ಸಂಬಂಧಿಸಿದಂತೆ ಕಠಿಣ ಕಾನೂನು ರೂಪಿಸುವ ಬಗ್ಗೆ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದ್ದು, ಶೀಘ್ರದಲ್ಲೇ ಹೊಸ ಕಾನೂನು ರೂಪುಗೊಳ್ಳಲಿದೆ ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಘಟಕದ ಅಧ್ಯಕ್ಷ ಸಿ.ಎಸ್. ಷಡಾಕ್ಷರಿ ಹೇಳಿದರು.

ನಗರದ ಪಂಡಿತ್ ಭೀಮಸೇನ ಜೋಶಿ ರಂಗಮಂದಿರದಲ್ಲಿ ಭಾನುವಾರ ನಡೆದ ರಾಜ್ಯ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಅವರು ಮಾತನಾಡಿದರು.

ರಾಜ್ಯದಲ್ಲಿ 2.73 ಲಕ್ಷ ಸರ್ಕಾರಿ ಹುದ್ದೆಗಳು ಖಾಲಿ ಇದ್ದು, ಇರುವ ನೌಕರರು ಒತ್ತಡದಿಂದ ಕೆಲಸ ನಿರ್ವಹಿಸುವುದರ ಜೊತೆಗೆ ನೆಮ್ಮದಿ, ಆರೋಗ್ಯ ಕೆಡಿಸಿಕೊಳ್ಳುತ್ತಿದ್ದಾರೆ. ಇದರ ನಡುವೆ, ನೌಕರರ ಮೇಲೆ ಹಲ್ಲೆ, ಅವಾಚ್ಯ ಶಬ್ದಗಳಿಂದ ನಿಂದನೆ ಪ್ರಕರಣಗಳು ಹೆಚ್ಚುತ್ತಿವೆ. ಈ ಬಗ್ಗೆ ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಬಳಿ ಚರ್ಚಿಸಿದ್ದು, ಸರ್ಕಾರಿ ನೌಕರರ ಮೇಲೆ ಹಲ್ಲೆ ಮಾಡಿದರೆ 50 ಸಾವಿರ ರೂ ದಂಡ, ಮೂರು ವರ್ಷ ಜೈಲು ಶಿಕ್ಷೆ ವಿಧಿಸುವ ಕಾನೂನು ಜಾರಿಗೊಳಿಸಲು ಆಗ್ರಹಿಸಿದ್ದೇವೆ ಎಂದು ತಿಳಿಸಿದರು.

ಸರ್ಕಾರಿ ನೌಕರರು ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ ಪಡೆಯಲು ಎದುರಿಸುತ್ತಿರುವ ತಾಂತ್ರಿಕ ಸಮಸ್ಯೆಗಳ ಪರಿಹಾರಕ್ಕೆ ಹಂತ ಹಂತವಾಗಿ ಕ್ರಮವಹಿಸಲಾಗುವುದು. ಈ ಯೋಜನೆ ಬಗ್ಗೆ ಟೀಕೆ ಮಾಡಿದರೆ ವೈಯಕ್ತಿಕವಾಗಿ ತಮ್ಮನ್ನು ತಾವೇ ಟೀಕೆ ಮಾಡಿಕೊಂಡಂತೆ. ಈ ಯೋಜನೆ ಅಡಿ ಪ್ರಸ್ತುತ 222 ಆಸ್ಪತ್ರೆಗಳು ಸೇವೆ ಒದಗಿಸುತ್ತಿವೆ. ಅವುಗಳನ್ನು 400 ಆಸ್ಪತ್ರೆಗಳಿಗೆ ವಿಸ್ತರಿಸಲು ಯೋಜಿಸಲಾಗಿದೆ ಎಂದು ತಿಳಿಸಿದರು.




ಹಲವು ವರ್ಷಗಳ ಕಾಲ ಸೇವೆ ಸಲ್ಲಿಸಿದ ಶಿಕ್ಷಕರು ಟಿಇಟಿ ಪರೀಕ್ಷೆ ಬರೆಯಬೇಕು ಎಂಬ ಆದೇಶ ಕೈಬಿಡುವಂತೆ ಆಗ್ರಹಿಸಿ ಸುಪ್ರೀಂ ಕೋರ್ಟ್‌ನಲ್ಲಿ ದಾವೆ ಹೂಡಲಾಗಿದೆ. ಈವರೆಗೆ 96 ಸಾವಿರ ಮಂದಿ ಶಿಕ್ಷಕರು ಇದಕ್ಕೆ ಸಹಿ ಹಾಕಿದ್ದಾರೆ. ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಶಿಕ್ಷಕರು ಸಹಿ ಮಾಡಿ ಕೊಟ್ಟರೆ ಪ್ರಕರಣ ಗೆಲ್ಲಲು ನೆರವಾಗಲಿದೆ. ವಕೀಲ ಚಂದ್ರಶೇಖರ್ ಅವರ ಶುಲ್ಕವನ್ನು ರಾಜ್ಯ ಸಂಘದಿಂದಲೇ ಪಾವತಿಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು.

> ರಾಜ್ಯ ಸರ್ಕಾರ ನೌಕರರ ಸಂಘ ತನ್ನ ಇತಿ-ಮಿತಿಯೊಳಗೆ ನೌಕರರ ಹಿತ ಕಾಪಾಡುವ ಕೆಲಸ ಮಾಡುತ್ತಿದೆ. ಟೀಕೆಗಳಿಗೆ ಪ್ರತಿಕ್ರಿಯಿಸಲು ಹೋಗುವುದಿಲ್ಲ. ಸಾಧನೆಗಳೇ ಮಾತನಾಡಬೇಕು ಎಂಬುದು ನನ್ನ ನಿಲುವು.
>
> – **ಸಿ.ಎಸ್. ಷಡಾಕ್ಷರಿ.**
> ನೌಕರರ ಸಂಘದ ರಾಜ್ಯಾಧ್ಯಕ್ಷ.

ರಾಜ್ಯದ ವಿವಿಧ ಭಾಗಗಳಲ್ಲಿರುವ ಸಂಘದ ನಿವೇಶನಗಳು ಹಾಗೂ ಕಟ್ಟಡಗಳ ದಾಖಲೆಗಳನ್ನು ಸರಿಯಾಗಿ ಸಂರಕ್ಷಿಸಬೇಕು. ಲೀಸ್ ಅವಧಿ ಮುಗಿದ ಸ್ಥಳಗಳಲ್ಲಿ ಮರು ಲೀಸ್ ಪ್ರಕ್ರಿಯೆ ಕೈಗೊಳ್ಳಬೇಕು. ಅನಗತ್ಯವಾಗಿ ಡ್ರಾ ಮಾಡಲಾದ ಸಂದ ಹಣವನ್ನು ಸರಿಪಡಿಸುವ ಕಾರ್ಯ ನಡೆಯುತ್ತಿದೆ ಎಂದು ತಿಳಿಸಿದರು.

ಸರ್ಕಾರಿ ನೌಕರರ ಸಂಘದಿಂದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ, ಗಡಿನಾಡ ಕನ್ನಡ ಉತ್ಸವ, ನೌಕರರ ದಿನಾಚರಣೆ, ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಆಯೋಜನೆ ಬಗ್ಗೆ ಸಭೆಯಲ್ಲಿ ಚರ್ಚೆಗಳು ನಡೆದವು.

---

### ಶ್ರೀ ಮಡಿವಾಳ ಮಾಚಿದೇವ ಜಯಂತಿ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

# ಮಾಚಿದೇವರ ತತ್ವಾದರ್ಶಗಳನ್ನು ಅಳವಡಿಸಿಕೊಳ್ಳಿ




> ಶಿರಗುಂಪಿ ಸರ್ಕಾರಿ ಪ್ರೌಢಶಾಲೆಯ ಶಿಕ್ಷಕಿ ಸುಜಾತಾ ಮಡಿವಾಳರ ಉಪನ್ಯಾಸ ನೀಡಿ, ಮಡಿವಾಳ ಮಾಚಿದೇವರು ವೀರನಿಷ್ಠೆಯ ಶರಣರಾಗಿದ್ದರು. ವಿಜಾಪುರ ಜಿಲ್ಲೆಯ ಸಿಂಧಗಿ ತಾಲೂಕಿನ ದೇವರ ಹಿಪ್ಪರಗಿಯಲ್ಲಿ ಪರುವತಯ್ಯ – ಸುಜ್ಞಾನವ್ವ ದಂಪತಿಗಳ ಪುತ್ರರಾಗಿ ಜನಿಸಿದರು. ಕಲ್ಯಾಣ ಇವರ ಕಾರ್ಯಕ್ಷೇತ್ರವಾಗಿತ್ತು. ಆರಾಧ್ಯದೈವ ಕಲ್ಲಿನಾಥವಾಗಿದ್ದು, ಕಾವ್ಯ ಪುರಾಣಗಳಲ್ಲಿ ಇವರನ್ನು ವೀರಭದ್ರನ ಅವತಾರವೆಂದು ಬಣ್ಣಿಸಲಾಗಿದೆ. ಶರಣರ ಬಟ್ಟೆಗಳನ್ನು ಶುಚಿ ಮಾಡುವುದು ಇವರ ಕಾಯಕವಾಗಿತ್ತು. ಇವರು ತಮ್ಮ ವಚನಗಳ ಮೂಲಕ ಸಮಾಜದಲ್ಲಿ ಅಸ್ಪೃಶ್ಯತೆ, ಅಂಧಕಾರ, ಮೂಢನಂಬಿಕೆ, ಅನಾಚಾರಗಳನ್ನು ಹೋಗಲಾಡಿಸಿ ಸಮಾಜ ಸುಧಾರಣೆಗಾಗಿ ಶ್ರಮಿಸಿದರು ಎಂದು ತಿಳಿಸಿದರು.

**■ವಿಜಯಸಾಕ್ಷಿ ಸುದ್ದಿ, ಗದಗ**

ಮಡಿವಾಳ ಮಾಚಿದೇವರು 12ನೇ ಶತಮಾನದ ಪ್ರಸಿದ್ಧ ವಚನಕಾರರು. ತಮ್ಮ ಕಾಯಕ ನಿಷ್ಠೆಯಿಂದ ಹಾಗೂ ವಚನಗಳ ಮೂಲಕ ಸಮಾಜದಲ್ಲಿ ತಾರತಮ್ಯ, ಅಂಕು-ಡೊಂಕುಗಳನ್ನು ತಿದ್ದಿ ಸಮಾಜ ಸುಧಾರಣೆಗಾಗಿ ಶ್ರಮಿಸಿದ್ದಾರೆ. ಅವರ ತತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಸೋಮವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಶ್ರೀ ಮಡಿವಾಳ ಮಾಚಿದೇವ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಡಿವಾಳ ಮಾಚಿದೇವರು ಜಗಜ್ಯೋತಿ ಬಸವಣ್ಣನವರ ತತ್ವಗಳಿಂದ ಪ್ರೇರಿತರಾದವರು. ಸಮಾಜದಲ್ಲಿ ಸಮಾನತೆಗಾಗಿ ತಮ್ಮ ವಚನಗಳ ಮೂಲಕ ಹೋರಾಡಿದವರು. ಶರಣರ ಬಟ್ಟೆಗಳನ್ನು ಮಡಿ ಮಾಡುವುದು ಇವರ ಕಾಯಕವಾಗಿತ್ತು. ಕಾಯಕನಿಷ್ಠ, ಸದಾಚಾರವುಳ್ಳವರ ಶಿವಶರಣರ ಬಟ್ಟೆಗಳನ್ನು ಮಾತ್ರ ಮಡಿ ಮಾಡುವ ನಿಷ್ಠುರ ವಚನಕಾರರಾಗಿದ್ದರು. ಇವರ ವಚನಗಳಲ್ಲಿನ ಸಂದೇಶಗಳು ಸಾರ್ವಕಾಲಿಕವಾಗಿವೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಇದೇ ಸಂದರ್ಭದಲ್ಲಿ ಸಮಾಜದ ಹಿರಿಯರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಡಿವೈಎಸ್‌ಪಿ ವಿದ್ಯಾಧರ ನಾಯಕ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ, ರಾಜು ಕಂಠಿಗೊಣ್ಣವರ, ಶ್ರೀಧರ ಚಿನಗುಂಡಿ ಸೇರಿದಂತೆ ಸಮಾಜದ ಗಣ್ಯರು, ಹಿರಿಯರು, ಪ್ರಮುಖರು ಹಾಜರಿದ್ದರು.

ನಾಡಗೀತೆಯೊಂದಿಗೆ ಪ್ರಾರಂಭವಾದ ಕಾರ್ಯಕ್ರಮದಲ್ಲಿ ಪ್ರೊ. ಬಾಹುಬಲಿ ಜೈನರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

---

# ಮಹಿಳಾ ನೌಕರರ ಸಂಘಟನೆಗೆ ಬಲ ತುಂಬಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಮಹಿಳಾ ನೌಕರರ ಆತ್ಮಸ್ಥೈರ್ಯ ಹೆಚ್ಚಿಸುವ ಮತ್ತು ಅವರ ಸಮಸ್ಯೆಗಳಿಗೆ ಧ್ವನಿಯಾಗುವ ನಿಟ್ಟಿನಲ್ಲಿ ಅಖಿಲ ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರ ಸಂಘವು ಬಲಿಷ್ಠವಾಗಿ ಹೊರಹೊಮ್ಮುತ್ತಿದ್ದು, ಶೀಘ್ರದಲ್ಲೇ ಗದಗ ಜಿಲ್ಲೆಯಲ್ಲೂ ಸಂಘಟನೆಯ ಕಾರ್ಯ ಚಟುವಟಿಕೆಗಳು ಆರಂಭವಾಗಲಿವೆ ಎಂದು ಸಂಘದ ರಾಜ್ಯ ಅಧ್ಯಕ್ಷೆ ರೋಶನಿ ಗೌಡ ತಿಳಿಸಿದರು.

ಸೋಮವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ 20 ಜಿಲ್ಲೆಗಳಲ್ಲಿ ಈಗಾಗಲೇ ಸಂಘಟನೆ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ತಾಲೂಕು ಮಟ್ಟದ ಘಟಕಗಳೂ ರಚನೆಯಾಗಿವೆ. ಈಗ ಗದಗ ಜಿಲ್ಲೆಯ ಮಹಿಳಾ ನೌಕರರನ್ನು ಒಗ್ಗೂಡಿಸಲು ಸಿದ್ಧತೆ ನಡೆಸಲಾಗಿದೆ ಎಂದರು.

ಸಂಘಟನೆಯ ಪ್ರಮುಖ ಬೇಡಿಕೆಯಾಗಿದ್ದ ಋತುಚಕ್ರ ರಜೆಯನ್ನು ರಾಜ್ಯ ಸರ್ಕಾರವು ಮಂಜೂರು ಮಾಡಿರುವುದು ದೊಡ್ಡ ಯಶಸ್ಸು. ಕೇವಲ ಸರ್ಕಾರಿ




ನೌಕರರು ಮಾತ್ರವಲ್ಲದೆ, ಖಾಸಗಿ ವಲಯದ ಮಹಿಳೆಯರಿಗೂ ಈ ಸೌಲಭ್ಯ ಸಿಗುವಂತೆ ಮಾಡಿರುವುದು ಹೆಮ್ಮೆಯ ವಿಷಯ. ಇದಕ್ಕಾಗಿ ಡಿಸೆಂಬರ್‌ನಲ್ಲಿ ಬೆಂಗಳೂರಿನಲ್ಲಿ ಬೃಹತ್ ಸಮಾವೇಶ ನಡೆಸಿ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ. ಶಿವಕುಮಾರ ಸಹಿತ ಸಂಪುಟದ ಅನೇಕ ಸಚಿವರನ್ನು ಸನ್ಮಾನಿಸಲಾಗಿದೆ ಎಂದರು.

ಅದೇ ಕಾರ್ಯಕ್ರಮದಲ್ಲಿ ಸೆಪ್ಟೆಂಬರ್ 13ನ್ನು ಮಹಿಳಾ ನೌಕರರ ದಿನವನ್ನಾಗಿ ಆಚರಿಸಲು ಸರಕಾರ ಘೋಷಣೆ ಮಾಡಿರುವುದು ಸಂಘಟನೆಯ ನಿರಂತರ ಹೋರಾಟಕ್ಕೆ ಸಂದ ಜಯವಾಗಿದೆ ಎಂದು ತಿಳಿಸಿದರು.

ಕಚೇರಿ ಮತ್ತು ಕುಟುಂಬದ ಜವಾಬ್ದಾರಿಗಳ ನಡುವೆ ಸಿಲುಕುವ ಮಹಿಳಾ ನೌಕರರ ಮಾನಸಿಕ ಒತ್ತಡ ನಿವಾರಣೆಗಾಗಿ ಸಂಘಟನೆಯು ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸುತ್ತಾ ಬಂದಿದೆ. ಗದಗ ಜಿಲ್ಲೆಯ ಎಲ್ಲಾ ಮಹಿಳಾ ನೌಕರರು ಸಂಘಟನೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವ ಮೂಲಕ ತಮ್ಮ ಹಕ್ಕುಗಳ ರಕ್ಷಣೆಗೆ ಕೈಜೋಡಿಸಬೇಕು ಎಂದರು.

ಸುದ್ದಿಗೋಷ್ಠಿಯಲ್ಲಿ ಸಂಘದ ರಾಜ್ಯ ಖಜಾಂಚಿ ವೀಣಾ ಕೃಷ್ಣಮೂರ್ತಿ, ಸಂಘಟನಾ ಕಾರ್ಯದರ್ಶಿ ಎಂ. ಆಶಾರಾಣಿ ಹಾಗೂ ಮಹಿಳಾ ನೌಕರರ ಉಪಸ್ಥಿತರಿದ್ದರು.

---

# ಶೇ. 100ರಷ್ಟು ಕರ ವಸೂಲಾತಿಗೆ ಸೂಚನೆ




**■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ತಾಲೂಕಿನಲ್ಲಿ ಕರವಸೂಲಿ ಪ್ರಮಾಣ ಕಡಿಮೆ ಇರುವ ಕಾರಣ ಫೆಬ್ರವರಿ ತಿಂಗಳಲ್ಲಿ ಕರವಸೂಲಿ ಮಾಸಾಚರಣೆ ಹಮ್ಮಿಕೊಳ್ಳಲಾಗಿದೆ. ಈ ತಿಂಗಳ ಪೂರ್ತಿ ಅಭಿಯಾನ ಹಮ್ಮಿಕೊಂಡು ಶೇ. 100ರಷ್ಟು ಪ್ರಗತಿ ಸಾಧಿಸಬೇಕು ಎಂದು ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರು ಹೇಳಿದರು.

ತಾಲೂಕಿನ ಕುಂಟೋಜಿ ಗ್ರಾ.ಪಂ ಸೋಮವಾರ ಭೇಟಿ ನೀಡಿ ಕರವಸೂಲಿ ಮಾಸಾಚರಣೆ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು.

ಈ ವೇಳೆ ಪಿಡಿಒ, ಪಂಚಾಯಿತಿ ಸಿಬ್ಬಂದಿಗಳ ಜೊತೆಗೆ ಮನೆ ಮನೆಗೆ ಭೇಟಿ ನೀಡಿ ತೆರಿಗೆ ಕಟ್ಟಲು ಸಾರ್ವಜನಿಕರಿಗೆ ಮನವಿ ಮಾಡಿದರು. ಎಲ್ಲಾ ಸಿಬ್ಬಂದಿಗಳು ಫೆ. 2ರಿಂದ 28ರವರೆಗೂ ನಿರಂತರ ಪ್ರತಿ ದಿನ ಒಂದು ತಿಂಗಳ ಕಾಲ ಕರವಸೂಲಿ ಮಾಡಿ ಶೇ. 100ರಷ್ಟು ಪ್ರಗತಿ ಸಾಧಿಸಬೇಕು ಎಂದು ತಿಳಿಸಿದರು.

ಕುಂಟೋಜಿ ಗ್ರಾಮದ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿ ಮಕ್ಕಳ ದಾಖಲಾತಿ ಪರಿಶೀಲಿಸಿದರು. ನಂತರ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಕಾರ್ಯನಿರ್ವಹಣೆಯನ್ನು, ಸ್ವಚ್ಛತೆ ಮತ್ತು ಆಹಾರ ಗುಣಮಟ್ಟವನ್ನು ಪರಿಶೀಲಿಸಿದರು. ಮಕ್ಕಳಿಗೆ ಪೌಷ್ಠಿಕ ಹಾಗೂ ಗುಣಮಟ್ಟದ ಆಹಾರ ನೀಡುವಂತೆ ಸೂಚಿಸಿದರು.

ಕುಂಟೋಜಿ ಗ್ರಾ.ಪಂ ವ್ಯಾಪ್ತಿಯ ಗೌಡಗೇರಿ ಗ್ರಾಮ ಪ್ರಧಾನಮಂತ್ರಿ ಆದರ್ಶ ಗ್ರಾಮಕ್ಕೆ ಆಯ್ಕೆಯಾಗಿದ್ದು, ಜಿಲ್ಲಾಧಿಕಾರಿಗಳ ಆದೇಶದ ಮೇರೆಗೆ ಗೌಡಗೇರಿ ಗ್ರಾಮಕ್ಕೆ ಭೇಟಿ ನೀಡಿ ಸ್ಥಳ ಪರಿಶೀಲನೆ ಮಾಡಿದರು. ನಂತರ ಶಾಲೆಗೆ ಭೇಟಿ ನೀಡಿ ಮಕ್ಕಳ ದಾಖಲಿತಿ, ಕಲಿಕಾ ಗುಣಮಟ್ಟ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಪಿಡಿಒ ವಿಶ್ವನಾಥ ರಾಠೋಡ, ಮುದುಕಪ್ಪ ಡೊಣ್ಣೆಗುಡ್ಡ, ಹುಸೇನಸಾಬ ತೆ-ೂಟದ, ಪರಸಪ್ಪ ರಾಠೋಡ, ಹನುಮಂತ ಡೊಳ್ಳಿನ, ಗ್ರಾಮಸ್ಥರು, ಪಂಚಾಯತ ಸಿಬ್ಬಂದಿಗಳು ಇದ್ದರು.

---

# ಒಪಿಎಸ್ ಮರುಜಾರಿಗೆ ಆಗ್ರಹ


**■ವಿಜಯಸಾಕ್ಷಿ ಸುದ್ದಿ, ಗದಗ**

ಹಳೇ ಪಿಂಚಣಿ ಯೋಜನೆ (ಒಪಿಎಸ್) ಮರುಜಾರಿಗೆ ಆಗ್ರಹಿಸಿ ಬೃಹತ್ ಸಮಾವೇಶ ನಡೆಸಲು ನೌಕರರೊಂದಿಗೆ ಚರ್ಚಿಸಿ, ನಿರ್ಧರಿಸಲಾಗುವುದು ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಘಟಕದ ಅಧ್ಯಕ್ಷ ಸಿ.ಎಸ್. ಷಡಾಕ್ಷರಿ ಹೇಳಿದರು.

ನಗರದಲ್ಲಿ ಭಾನುವಾರ ನಡೆದ ರಾಜ್ಯ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು,'ರಾಜ್ಯದಲ್ಲಿ 2.93 ಲಕ್ಷ ಮಂದಿ ಎನ್‌ಪಿಎಸ್ ನೌಕರರು ಇದ್ದಾರೆ. ಒಪಿಎಸ್‌ಗಾಗಿ ಸರ್ಕಾರ ಶೇ. 10ರಷ್ಟು ಮೊತ್ತ ನೀಡಿದರೆ ವರ್ಷಕ್ಕೆ 3 ಸಾವಿರ ಕೋಟಿ ರೂ ಹೊರೆ ಆಗುತ್ತದೆ. ಆದರೆ, ರಾಜ್ಯದಲ್ಲಿ 2.73 ಲಕ್ಷ ಸರ್ಕಾರಿ ಹುದ್ದೆಗಳು ಖಾಲಿ ಇದ್ದು, ಅದರಿಂದ ಸುಮಾರು 2,500 ಕೋಟಿ ರೂ ಉಳಿತಾಯ ಆಗುತ್ತಿದೆ. ಎನ್‌ಪಿಎಸ್ ಕಮಿಟಿ ಅಧ್ಯಕ್ಷರಾದ ಉಮಾ ಮಹಾದೇವನ್ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಈ ಬಗ್ಗೆ ತಿಳಿಸಿಕೊಡಲಾಗಿದೆ. ಎನ್‌ಪಿಎಸ್‌ನಿಂದ ಒಪಿಎಸ್ ಆಗಬೇಕು. ಅದು ಬಿಟ್ಟು ಬೇರೆ ಯಾವುದೇ ನಿರ್ಣಯಕ್ಕೂ ಒಪ್ಪುವುದಿಲ್ಲ ಎಂಬುದನ್ನು ತಿಳಿಸಲಾಗಿದೆ ಎಂದರು.

ಒಪಿಎಸ್ ಜಾರಿಗೆ ಆಗ್ರಹಿಸಿ ಎನ್‌ಪಿಎಸ್ ನೌಕರರು ಪ್ರತಿಭಟನೆ ಆಯೋಜನೆಗೆ ಒತ್ತಡ ಹೇರುತ್ತಿರುವ ವಿಷಯವನ್ನು ಸಿಎಂ ಗಮನಕ್ಕೂ ತರಲಾಗಿದೆ. ಕಾಂಗ್ರೆಸ್ ಸರ್ಕಾರ ತನ್ನ ಚುನಾವಣಾ ಪ್ರಣಾಳಿಕೆಯಲ್ಲೂ ಈ ವಿಷಯ ಪ್ರಸ್ತಾಪಿಸಿದ್ದು, ಈ ಬಗ್ಗೆ ಶೀಘ್ರವೇ ವರದಿ ತರಿಸಿಕೊಂಡು ಸಚಿವ ಸಂಪುಟದಲ್ಲಿ ಮಂಡಿಸಿ, ಎನ್‌ಪಿಎಸ್ ಅನ್ನು ಒಪಿಎಸ್ ಮಾಡುವಂತೆ ಮುಖ್ಯಮಂತ್ರಿ ಅವರಿಗೂ ಒತ್ತಾಯಿಸಲಾಗಿದೆ ಎಂದರು.

ಈ ಸಂಬಂಧ ಸರ್ಕಾರದ ಗಮನ ಸೆಳೆಯಲು ರಾಜ್ಯದ ಎಲ್ಲಾ ಎನ್‌ಪಿಎಸ್ ನೌಕರರನ್ನು ಒಂದೆಡೆ ಸೇರಿಸಿ ಸಮಾವೇಶ ಮಾಡುವ ಉದ್ದೇಶವಿದೆ. ಪ್ರತಿಭಟನೆಯನ್ನು ಯಾವಾಗ, ಹೇಗೆ ಮಾಡಬೇಕು ಎಂಬುದರ ಬಗ್ಗೆ ಎಲ್ಲರೊಂದಿಗೆ ಚರ್ಚಿಸಿ, ನಿರ್ಧರಿಸಲಾಗುವುದು ಎಂದು ತಿಳಿಸಿದರು.





---

# ಅಸ್ಪಷ್ಟ ಆರ್ಥಿಕ ಚಿತ್ರಣದ ಬಜೆಟ್

**■ವಿಜಯಸಾಕ್ಷಿ ಸುದ್ದಿ, ಗದಗ**

ಕೇಂದ್ರ ಹಣಕಾಸು ಮಂತ್ರಿ ನಿರ್ಮಲಾ ಸೀತಾರಾಮನ್ ಅವರು ಮಂಡಿಸಿದ ರಾಷ್ಟ್ರದ ಆರ್ಥಿಕ ಪ್ರಗತಿಗೆ ಇಂಬು ಕೊಡಬಲ್ಲ ಮುಂಗಡ ಪತ್ರವಾಗಿರದೇ ರಾಷ್ಟ್ರದ ಅರ್ಥ ವ್ಯವಸ್ಥೆಯ ನೈಜ ಚಿತ್ರಣವನ್ನು ಮರೆಮಾಚಿದೆ. ರಾಜ್ಯಗಳಿಗೆ ಹಣಕಾಸು ಹಂಚಿಕೆ ರಚನಾತ್ಮಕವಾಗಿಲ್ಲ ಎಂದು ರಾಜ್ಯದ ಕಾನೂನು ಹಾಗೂ ಸಂಸದೀಯ ವ್ಯವಹಾರಗಳು, ಪ್ರವಾಸೋದ್ಯಮ ಇಲಾಖೆ ಸಚಿವರೂ ಆಗಿರುವ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟಿದ್ದಾರೆ.



ಕೇಂದ್ರದ 2026-27ನೇ ಸಾಲಿನ ಬಜೆಟ್ ಕುರಿತು ಅವರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿ, ಆದಾಯ ಕರ ಮಿತಿಗಳನ್ನು ತರ್ಕಬದ್ಧಗೊಳಿಸುವಿಕೆಯನ್ನು ಬಿಟ್ಟು ಹೊಸ ಹಣಕಾಸು ಕಾಯ್ದೆಯನ್ನು ಜಾರಿಗೊಳಿಸುತ್ತಿರುವುದು ರಾಷ್ಟ್ರದ ಅರ್ಥ ವ್ಯವಸ್ಥೆಗೆ ತೀರಾ ಹಿನ್ನಡೆಯಾಗುತ್ತದೆ. ಆದಾಯ ತೆರಿಗೆಯ ರಿಟರ್ನ್‌ನನ್ನು ದಾಖಲಿಸುವಲ್ಲಿ ಮಾಡುವ ವಿಳಂಬವನ್ನು ಮನ್ನಾ ಮಾಡುವುದು ಮತ್ತು ಪರಿಷ್ಕರಿಸಲು ಅವಕಾಶ ನೀಡಿರುವುದು ಕಪ್ಪು ಹಣದ ಉತ್ಪತ್ತಿ ಹೆಚ್ಚಾಗಲು ಕಾರಣವಾಗುತ್ತದೆ.

ಕೇಂದ್ರ ಮುಂಗಡ ಪತ್ರದಲ್ಲಿ ಕರ್ನಾಟಕದ ಹೆಸರು ಪ್ರಸ್ತಾಪವಾಗಿದ್ದರೂ ಸಹ ನೈಜ ಹಣಕಾಸಿನ ಸ್ಪಷ್ಟವಾದ ಉಲ್ಲೇಖವಿಲ್ಲದೇ ಯೋಜನೆಗಳು ಕೇವಲ ಕಾಗದದ ಹುಲಿಗಳಾಗಿವೆ. ಆದ್ದರಿಂದ ಅಸ್ಪಷ್ಟ ಆರ್ಥಿಕ ಚಿತ್ರಣವನ್ನು ಒಳಗೊಂಡಿರುವ ಕೇಂದ್ರ ಮುಂಗಡ ಪತ್ರ ರಾಷ್ಟ್ರದ ಜನತೆಗೆ ನಿರಾಶಾದಾಯಕವಾಗಿದೆ ಹೇಳಿದ್ದಾರೆ.

# ಇಂದು ಶ್ರೀ ಶಿವರುದ್ರಮ್ಮ ದೇವಿಯ ಜಾತ್ರೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಪೇಠಬಣ ಕದರಗೇರಿ ಓಣಿಯಲ್ಲಿರುವ ಶಕ್ತಿಮಾತೆ ಶ್ರೀ ಶಿವರುದ್ರಮ್ಮ ದೇವಿಯ 3ನೇ ವರ್ಷದ ಲಕ್ಷದೀಪೋತ್ಸವ (ಜಾತ್ರೆ) ಇಂದು ಜರುಗಲಿದೆ.

ಜಾತ್ರೆಯ ಅಂಗವಾಗಿ ಅಂದು ಮಧ್ಯಾಹ್ನ 3ಕ್ಕೆ ದೇವಸ್ಥಾನದ ಹತ್ತಿರ ಮಹಿಳೆಯರು ಮತ್ತು ಯುವಕರಿಗಾಗಿ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಸಂಜೆ 5.30ಕ್ಕೆ ಲಕ್ಷದೀಪೋತ್ಸವವನ್ನು ಶಿರಹಟ್ಟಿ ಫಕ್ಕಿರೇಶ್ವರ ಸಂಸ್ಥಾನಮಠದ ಶ್ರೀ ಫಕೀರ ದಿಂಗಾಲೇಶ್ವರ ಜಗದ್ಗುರುಗಳು ನೆರವೇರಿಸುವರು. ಬಳಿಕ ಅವರಿಂದ 'ಜೀವನ ದರ್ಶನ' ಪ್ರವಚನ ಜರುಗಲಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ದೇವಸ್ಥಾನ ಟ್ರಸ್ಟ್ ಅಧ್ಯಕ್ಷ ಸೋಮಣ್ಣ ಉಪನಾಳ ತಿಳಿಸಿದ್ದಾರೆ.



ಮುಳಗುಂದ ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿಗಳ 167ನೇ ಜಾತ್ರಾಮಹೋತ್ಸವದ ಮಾಹಾ ರಥೋತ್ಸವ ಸಕಲ ವಾದ್ಯ ಮೇಳಗಳೊಂದಿಗೆ ಡಾ. ಮಲ್ಲಿಕಾರ್ಜುನ ಮಾಹಾಸ್ವಾಮಿಗಳ ನೇತೃತ್ವದಲ್ಲಿ ಜರುಗಿತು.

## ಯುವಜನತೆಗೆ ಎಚ್ಚರಿಕೆಯ ಸಂದೇಶ ಸಾರುವ ಡಾ. ನಂದಾ ಹಣಬರಟ್ಟಿ ಅವರ ಕಲಾಶ್ರಮ

# ಮಾದಕ ಮರಣಮಾರ್ಗ, ಜಾಗೃತಿ ಜೀವನಮಾರ್ಗ

ಯೌವನವೆಂದರೆ ಯತ್ನದ ಯುಗ, ಯಶಸ್ಸಿನ ಯಾತ್ರೆ, ಯೋಚನೆಯ ಯೋಗ. ಆದರೆ ಇಂದಿನ ಕಾಲಘಟ್ಟದಲ್ಲಿ ಕೆಲ ಯುವಕರು ಯೋಗ್ಯ ದಾರಿಯನ್ನು ಬಿಟ್ಟು ಮಾದಕ ಮೃಗತೃಷ್ಣೆಯ ಕಡೆಗೆ ಮರುಳಾಗುತ್ತಿರುವುದು ಮನಕಲುಕುವ ಸಂಗತಿ.


ಮಾದಕ ಪದಾರ್ಥಗಳು ಮೊದಲು ಮಧುರ ಮೃಗಜಾಲದಂತೆ ಮಿಂಚುತ್ತವೆ; ನಂತರ ಮನುಜ ಮನಸ್ಸನ್ನು ಮಂಕುಗೊಳಿಸಿ, ಮೌಲ್ಯಗಳನ್ನು ಮಣ್ಣಾಗಿಸುತ್ತವೆ. ಒಂದು ಕ್ಷಣದ ಕುತೂಹಲ, ಜೀವನದ ಕುಸಿತಕ್ಕೆ ಕಾರಣವಾಗಬಹುದು; ಒಂದು ಸಣ್ಣ ಸವಿಗೆ ಸಂಪೂರ್ಣ ಸುಖವನ್ನು ಸವೆಸಬಹುದು. ಈ ಭಯಾನಕ ಸತ್ಯವನ್ನು ಸಮಾಜದ ಮುಂದೆ ಸ್ಪಷ್ಟವಾಗಿ ಚಿತ್ರಗಳ ಮೂಲಕ ಚಿತ್ರೀಕರಿಸಿರುವವರು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ. ಅವರ ಚಿತ್ರಗಳು ಕೇವಲ ರೇಖೆಗಳಲ್ಲ. ಅವು ಜಾಗೃತಿಯ ಜ್ವಾಲೆ, ಜೀವನದ ಜಾಗೃತಿ ಘಂಟೆ.

ಸಿರಿಂಜ್‌ನ ಸಂಕೇತ, ಕತ್ತಲೆಯ ಕೈಗಳ ಹಿಡಿತ, ಕನಸುಗಳನ್ನು ಕುಸಿಯುವ ಗುಳಿಗೆಗಳ ಚಿತ್ರಣ... ಹೀಗೆ ಪ್ರತಿ ಚಿತ್ರವೂ




ಪ್ರಾಸಂಗಿಕ ಸಂದೇಶವನ್ನು ಪ್ರಬಲವಾಗಿ ಸಾರುತ್ತದೆ: "Say No To Drugs" ಎಂಬುದು ಕೇವಲ ವಾಕ್ಯವಲ್ಲ, ಭವಿಷ್ಯವನ್ನು ಬಾಚಿಕೊಳ್ಳುವ ಬಲವಾದ ಬದ್ಧತೆ. ಡಾ. ನಂದಾ ಹಣಬರಟ್ಟಿ ಅವರ ಕಲಾಶ್ರಮ ಯುವಜನತೆಗೆ ಎಚ್ಚರಿಕೆಯ ಸಂದೇಶವಾಗಿದೆ. ಅವರ ಕಲಾಕೃತಿ ಹೇಳುವುದು ಒಂದೇ ಮಾತು– 'ಮಾದಕ ಮದ ಕ್ಷಣಿಕ, ಅದರ ಮಸಿ ಶಾಶ್ವತ.'

ಮಾದಕ ವ್ಯಸನವು ವ್ಯಕ್ತಿಯ




ಪ್ರಗತಿಯನ್ನು ಪತನಗೊಳಿಸುವ ಪಾತಾಳ; ಕುಟುಂಬದ ಕನಸುಗಳನ್ನು ಕರಗಿಸುವ ಕಹಿ ಕತ್ತಲೆ. ಒಬ್ಬ ಯುವಕನ ವ್ಯಸನ, ಒಟ್ಟು ಮನೆಯ ವ್ಯಥೆ; ಒಂದು ಮನೆ ಕುಸಿದರೆ, ಸಮಾಜವೇ ಕುಂದುತ್ತದೆ. ಯುವ ಶಕ್ತಿಯು ದೇಶದ ಸಂಪತ್ತು. ಅದು ಮಲಿನ ಮಾದಕಕ್ಕೆ ಮಣಿದರೆ, ಭವಿಷ್ಯವೇ ಮಸುಕಾಗುತ್ತದೆ. ಆದರೆ ಜಾಗೃತಿಯ ಜ್ಯೋತಿ ಜ್ವಲಿಸಿದರೆ, ಯುವ ಮನಗಳು ಯಶಸ್ಸಿನ ಯುಗವನ್ನು ನಿರ್ಮಿಸಬಲ್ಲವು. ಪೋಷಕರು ಪ್ರೀತಿ




ನೀಡಿ ಪಥ ತೋರಬೇಕು; ಶಿಕ್ಷಕರು ಶಿಸ್ತು ನೀಡಿ ಶಕ್ತಿ ತುಂಬಬೇಕು; ಸಮಾಜವು ಸಹಕಾರ ನೀಡಿ ಸದುದ್ದೇಶ ಬೆಳೆಸಬೇಕು. ಈ ಕಾರ್ಯ ಪ್ರಾಮಾಣಿಕವಾದಲ್ಲಿ ಮಾದಕ ಮಾರುಕಟ್ಟೆ ಮಣಿಯುತ್ತದೆ.

ಚಿತ್ರಗಳು ಮಾತಾಡುತ್ತವೆ –ಮೌನದಲ್ಲೇ ಮಹತ್ವದ ಸಂದೇಶ ಸಾರುತ್ತವೆ. ಡಾ. ನಂದಾ ಹಣಬರಟ್ಟಿ ಅವರ ಈ ಕಲಾ ಪ್ರಯತ್ನ ಸಮಾಜದ ಮನಸ್ಸಿಗೆ ಮದ್ದು, ಯುವಜನತೆಗೆ ದಿಕ್ಕು, ಭವಿಷ್ಯಕ್ಕೆ ಬೆಳಕು.

ಬನ್ನಿ, ಮನಸ್ಸಿನಲ್ಲಿ ದೃಢ ನಿರ್ಧಾರ ಮಾಡೋಣ: ಮಾದಕಕ್ಕೆ ಮುತ್ತಿಗೆ ಹಾಕೋಣ, ಮೌಲ್ಯಗಳಿಗೆ ಮುಕುಟ ಹಾಕೋಣ. ಮಾದಕವನ್ನು ತಳ್ಳಿ, ಮಾನವೀಯತೆಯನ್ನು ತಾಳಿ–ಇದೇ ಜೀವನದ ಜಯಗಾನ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಹಾಗೂ ಪೊಲೀಸ್ ಇಲಾಖೆ ಸಹಯೋಗದಲ್ಲಿ ಮಾದಕ ವ್ಯಸನದ ದುಷ್ಪರಿಣಾಮ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ. ಇದಕ್ಕೆ ಸಾರ್ವಜನಿಕರು ಸಹಕಾರ ನೀಡಿದಲ್ಲಿ ಮಾತ್ರ ಯಶಸ್ಸು ಸಾಧ್ಯ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಹೇಳಿದ್ದಾರೆ. ಈ ಮಾತು ಕೇವಲ ಮನವಿ ಅಲ್ಲ, ಸಾಮಾಜಿಕ ಸಂವೇದನೆಯ ಸತ್ಯಸಾಕ್ಷಿ. ಜಿಲ್ಲಾ ಪೊಲೀಸ್ ಅಧೀಕ್ಷಕ ರೋಹನ್ ಜಗದೀಶ್ ಅವರು, 'ಮಾದಕ ವ್ಯಸನವು ಯುವಜನರ ಭವಿಷ್ಯವನ್ನು ಭಸ್ಮಗೊಳಿಸುವ ಭೀಕರ ಬೆಂಕಿ. ಅದನ್ನು ಆರಿಸಲು ಕಾನೂನು ಕ್ರಮಗಳ ಜೊತೆಗೆ ಕುಟುಂಬ ಹಾಗೂ ಸಮಾಜದ ಕಾಳಜಿಯ ಕೈಗಳು ಕೂಡ ಅಗತ್ಯ' ಎಂದು ಅಭಿಪ್ರಾಯಪಟ್ಟಿದ್ದಾರೆ.

**–ವಸಂತ ಬಿ.ಮಡ್ಲೂರ**
ಸಹಾಯಕ ನಿರ್ದೇಶಕರು,
ವಾರ್ತಾ ಇಲಾಖೆ, ಗದಗ.

## ಶಿರಹಟ್ಟಿಯ ಹಿಂದೂ ಸಮ್ಮೇಳನದಲ್ಲಿ ಗೋವರ್ಧನರಾವ್ ಮುಖ್ಯ ಭಾಷಣ

# ಹಿಂದೂ ಧರ್ಮ, ಸಂಸ್ಕೃತಿ ಭದ್ರವಾಗಿದೆ




ದೇಶದ ಭವಿಷ್ಯದ ದೃಷ್ಟಿಯಿಂದ ಪ್ರತಿ ಮನೆಯಲ್ಲಿಯೂ ಸಹ ನಮ್ಮ ಸಂಸ್ಕೃತಿಯ ಬಗ್ಗೆ ಅರಿವನ್ನು ಮೂಡಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಇದಕ್ಕಾಗಿಯೇ ಸಂಘವು ಹೋಬಳಿ ಮಟ್ಟದಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ.

ನಮ್ಮ ಮುಂದಿನ ಪೀಳಿಗೆಗೂ ಸಹ ನಮ್ಮ ಸಂಸ್ಕೃತಿಯನ್ನು ಪರಿಚಯಿಸುವುದಕ್ಕೆ ಮತ್ತು ವಿಶ್ವಕ್ಕೆ ಭಾರತಮಾತೆಯನ್ನು ಗುರುವನ್ನಾಗಿಸುವುದಕ್ಕೆ ಇಂದಿನ ಯುವ ಪೀಳಿಗೆಗೆ ಹಿಂದುತ್ವ, ಧರ್ಮ, ಸಮಾಜ ಮತ್ತು ಸಂಸ್ಕೃತಿಯನ್ನು ಬಗ್ಗೆ ತಿಳಿಸಬೇಕು. ಸ್ವದೇಶಿ ಉತ್ಪನ್ನಗಳನ್ನು ಬಳಸಿ ದೇಶವನ್ನು ಸುಭದ್ರಗೊಳಿಸಬೇಕೆಂದು ಗೋವರ್ಧನರಾವ್ ಹೇಳಿದರು.

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ರಾಷ್ಟ್ರೀಯ ಸ್ವಯಂ ಸೇವಕ ಸಂಘವು ಶತಾಬ್ದಿ ಹೊಸ್ತಿಲಲ್ಲಿರುವ ಈ ಸುಸಂದರ್ಭದಲ್ಲಿ ಗ್ರಾಮ ಮಟ್ಟದಲ್ಲಿಯೂ ಸಹ ನಾವೆಲ್ಲ ಹಿಂದೂ–ನಾವೆಲ್ಲ ಬಂಧು ಎನ್ನುವ ಮನೋಭಾವನೆ ಪ್ರತಿಯೊಬ್ಬ ಹಿಂದೂವಿನಲ್ಲಿಯೂ ಬರಬೇಕು ಎಂದು ವಿಶ್ವ ಹಿಂದೂ ಪರಿಷತ್‌ನ ಕರ್ನಾಟಕ ಉತ್ತರ ಪ್ರಾಂತದ ಉಪಾಧ್ಯಕ್ಷ ಗೋವರ್ಧನರಾವ್ ಹೇಳಿದರು.

ಅವರು ಶಿರಹಟ್ಟಿಯ ಸಿಸಿಎನ್ ಆಂಗ್ಲ ಶಾಲೆಯ ಆವರಣದಲ್ಲಿ ಜರುಗಿದ ಹಿಂದೂ ಸಮ್ಮೇಳನದಲ್ಲಿ ಮುಖ್ಯ ಭಾಷಣವನ್ನು ನೀಡಿ ಮಾತನಾಡಿದರು.

ಸಾವಿರಾರು ವರ್ಷಗಳಿಂದಲೂ ಪರಕೀಯರ ದಾಳಿಯಿಂದ ದೇಶದ ಅಪಾರ ಸಂಪತ್ತನ್ನು ದೋಚಲಾಗಿದೆ. ಆದರೆ ಇಲ್ಲಿರುವ ಸಂಸ್ಕೃತಿಯನ್ನು ದೋಚಿಕೊಂಡು ಹೋಗಲು ಸಾಧ್ಯವಾಗಿಲ್ಲ. ಪಾಶ್ಚಿಮಾತ್ಯ ದೇಶಗಳಲ್ಲಿ ಮೂಲ ಸಂಸ್ಕೃತಿ ಕಣ್ಮರೆಯಾಗುತ್ತಿದೆ. ಆದರೆ ನಮ್ಮ ದೇಶದಲ್ಲಿ ಇಂದಿಗೂ ಹಿಂದೂ ಧರ್ಮ, ಮತ್ತು ಸಂಸ್ಕೃತಿ ಭದ್ರವಾಗಿದೆ. ರಾಜಕೀಯದ ಅಸ್ತಿತ್ವಕ್ಕಾಗಿ ಜಾತಿಗಳಲ್ಲಿ ಸ್ಪರ್ಶ–ಅಸ್ಪೃಶ್ಯ ಎಂಬುದನ್ನು ಕಾಣುತ್ತಿದ್ದು, ಇದನ್ನೂ ಹೋಗಲಾಡಿಸಲು ಸಂಘವು ನಿರಂತರವಾಗಿ ಕೆಲಸವನ್ನು ಮಾಡುತ್ತಿದೆ. 12ನೇ ಶತಮಾನದಲ್ಲಿ ಬಸವಣ್ಣನವರು, ಕನಕದಾಸರು ಸಹ ತಮ್ಮ ಅನೇಕ ವಚನಗಳಲ್ಲಿ ನಾವೆಲ್ಲರೂ ಒಂದೇ ಎಂದು ಸಾರಿದ್ದನ್ನು ಸ್ಮರಿಸಬಹುದಾಗಿದೆ ಎಂದರು.

ಇದಕ್ಕೂ ಮುನ್ನ ಮರಾಠಾ ಓಣಿಯಲ್ಲಿಯ ಶ್ರೀ ಅಂಬಾಭವಾನಿ ದೇವಸ್ಥಾನದಿಂದ ಭವ್ಯ ಶೋಭಾಯಾತ್ರೆಯು ಪ್ರಮುಖ ವೃತ್ತಗಳಲ್ಲಿ ಸಂಚರಿಸಿತು. ಈ ಸಂದರ್ಭದಲ್ಲಿ ಸಾವಿರಾರು ಹಿಂದೂ ಕಾರ್ಯಕರ್ತರು, ಮಹಿಳೆಯರು ಭಾಗವಹಿಸಿದ್ದರು.

ಕಾರ್ಯಕ್ರಮದ ಸಾನ್ನಿಧ್ಯವನ್ನು ಸೊರಟೂರಿನ ಶಿವಯೋಗೇಶ್ವರ ಸ್ವಾಮೀಜಿ, ನೇತೃತ್ವವನ್ನು ವರವಿಯ ಮೌನೇಶ್ವರ ಸ್ವಾಮೀಜಿ ಹಾಗೂ ಅಧ್ಯಕ್ಷತೆಯನ್ನು ತಿಪ್ಪಣ್ಣ ಕೊಂಚಿಗೇರಿ ವಹಿಸಿ ಮಾತನಾಡಿದರು.

ಶಾಸಕ ಡಾ. ಚಂದ್ರು ಲಮಾಣಿ, ವಿಶ್ವನಾಥ ಕಪ್ಪತ್ತನವರ, ನಾಗರಾಜ ಲಕ್ಕುಂಡಿ, ಡಾ. ಭೀಮಸಿಂಗ್ ರಾಠೋಡ, ನಟರಾಜ ರಾನಡೆ, ಜಾನು ಲಮಾಣಿ, ಫಕ್ಕೀರೇಶ ರಟ್ಟಿಹಳ್ಳಿ, ಶಂಕರ ಮರಾಠೆ, ಸಿ.ಸಿ. ನೂರಶೆಟ್ಟರ, ಡಾ. ಎಸ್.ಎಂ. ಬುರಬರೆ, ರವಿ ಬೇಂದ್ರೆ, ಪ್ರವೀಣ ಜೈನ್, ಗೂಳಪ್ಪ ಕರಿಗಾರ, ವೀರಣ್ಣ ಮಜ್ಜಗಿ, ಶಿವು ಚಕ್ರಸಾಲಿ, ಸುರೇಶ ಕಪ್ಪತ್ತನವರ, ಪ್ರಭು ಹಲಸೂರ, ಸುರೇಶ ಅಕ್ಕಿ, ಪವನ ಮಹೇಂದ್ರಕರ, ಯಲ್ಲಪ್ಪ ಇಂಗಳಗಿ, ಬಸವರಾಜ ವಡವಿ, ಸಂತೋಷ ತೊಡೇಕರ, ವಿಠ್ಠಲ ಭಿಡವೆ, ರಾಮಣ್ಣ ಕಮ್ಮಾರ, ಮಹಾದೇವಪ್ಪ ಹಡಪದ, ನೀಲಪ್ಪ ಚಕ್ರಸಾಲಿ, ಶ್ರೀನಿವಾಸ ಬಾರಬಾರ, ಪ್ರಕಾಶ ಬಡೆಣ್ಣವರ, ಅಶೋಕ ಹುಬ್ಬಳ್ಳಿ, ಆನಂದ ಲಮಾಣಿ ಮುಂತಾದವರು ಉಪಸ್ಥಿತರಿದ್ದರು.

# ದಕ್ಷ ಆಡಳಿತದಿಂದ ಸಂಘವು ಅಭಿವೃದ್ಧಿ ಹೊಂದಿದೆ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಸಹಕಾರಿ ಸಂಘಗಳ ಅಭಿವೃದ್ಧಿಗೆ ಸಹಕಾರ ಅಗತ್ಯವಿದೆ ಎಂದು ನೂತನ ಅಧ್ಯಕ್ಷ ಮಲ್ಲಪ್ಪ ಹೊಸಮನಿ ಹೇಳಿದರು.

ಅವರು ಕುರ್ತಕೋಟಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ನೂತನ ಅಧ್ಯಕ್ಷ–ಉಪಾಧ್ಯಕ್ಷ ಹಾಗೂ ಆಡಳಿತ ಮಂಡಳಿಯ ಆಯ್ಕೆ ನಂತರ ಮಾತನಾಡಿ, ಈ ಸಹಕಾರಿ ಸಂಘವು ದಿ. ರಾವ್‌ಬಾಹ್ದೂರ ಪಕ್ಕೀರಪ್ಪ ಲಕ್ಷ್ಮೇಶ್ವರರಿಂದ 12/2/1909ರಲ್ಲಿ ಸ್ಥಾಪನೆಗೊಂಡಿತು. ನಂತರ ದಿ. ವಿನಾಯಕರಾವ್ ಪಾಟೀಲ ಅಧ್ಯಕ್ಷರಾಗಿ, ದಿ. ಬಸಪ್ಪ ಲಕ್ಕುಂಡಿ ಕಾರ್ಯದರ್ಶಿ ದಕ್ಷ ಆಡಳಿತದಿಂದ ಈಗ ಈ ಸಂಸ್ಥೆಗೆ 116 ವರ್ಷ ಸುದೀರ್ಘ ಸೇವೆ ಸಲ್ಲಿಸುತ್ತಾ ಬಂದಿದ್ದು, ಇಲ್ಲಿಯವರೆಗೂ ಅಧ್ಯಕ್ಷ–ಉಪಾಧ್ಯಕ್ಷ, ಆಡಳಿತ ಮಂಡಳಿ ಸದಸ್ಯರನ್ನು ಅವಿರೋಧ ಆಯ್ಕೆ ಮಾಡುತ್ತಿರುವುದು ಇತಿಹಾಸದ ಪುಟದಲ್ಲಿ ಸೇರಿದೆ.

ಗಿರೀಶ ಡಬಾಲಿ ಹಾಗೂ ಗ್ರಾಮ ಪಂಚಾಯಿತಿ ಅಧ್ಯಕ್ಷ ಅಪ್ಪಣ್ಣಾ ಇನಾಮತಿ ಎಲ್ಲರ ದಕ್ಷ ಆಡಳಿತದಿಂದ ಸಂಘವು ಅಭಿವೃದ್ಧಿ ಹೊಂದುತ್ತಾ ಪ್ರಗತಿಯಲ್ಲಿ ಸಾಗುತ್ತಿದೆ ಎಂದರು.

ನೂತನ ಅಧ್ಯಕ್ಷರಾಗಿ ಮಲ್ಲಪ್ಪ ಹೊಸಮನಿ, ಉಪಾಧ್ಯಕ್ಷರಾಗಿ ಬಸವರಾಜ ಮಿಶಣ್ಣವರ, ನಿರ್ದೇಶಕರಾಗಿ ಫಕ್ಕೀರಸಾಬ ತಹಸೀಲ್ದಾರ, ಬಸಪ್ಪ ಕೋಣನವರ, ಶಿವಮೂರ್ತಯ್ಯ ಹಿರೇಮಠ, ಸೋಮರೆಡ್ಡಿ ಹೊಸಮನಿ, ಅರುಣ ಹಾಳಕೇರಿ, ಪ್ರಭಪ್ಪ ಹೊಸಮನಿ, ಗೋವಿಣಮದಪ್ಪ ಮೂಲಿಮನಿ, ಗೀತಾ ಹೆಬಸೂರ, ಶೇಖವ್ವ ಲಕ್ಕುಂಡಿ, ಬಸಪ್ಪ ಮಸ್ಕಿ, ಅವಿರೋಧವಾಗಿ ಆಯ್ಕೆಯಾದರು. ಸಂಘದ ಮುಖ್ಯ ಕಾರ್ಯನಿರ್ವಾಹಕ ಬಸವರಾಜ ಮಣ್ಣೂರ, ಚುನಾವಣಾಧಿಕಾರಿಯಾಗಿ ಶಾಂತಾ ಹಿರೇಮಠರವರು ಚುನಾವಣೆ ನಂತರ ಆಯ್ಕೆ ಘೋಷಿಸಿದರು.

# ಕಲಿಕೆಯಲ್ಲಿ ನಿಧಾನಗತಿಯ ವಿದ್ಯಾರ್ಥಿಗಳಿಗೆ ಉತ್ತೇಜನ



**■ವಿಜಯಸಾಕ್ಷಿ ಸುದ್ದಿ, ಗದಗ**

ಎಸ್.ಎಸ್.ಎಲ್.ಸಿ ಫಲಿತಾಂಶ ಸುಧಾರಣೆ ಮತ್ತು ಕಲಿಕೆಯಲ್ಲಿ ನಿಧಾನಗತಿಯ ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡುವ ಉದ್ದೇಶದಿಂದ ಗದಗ ಜಿಲ್ಲಾ ಉನಿರ್ದೇಶಕರು ಹಾಗೂ ಅಭಿವೃದ್ಧಿ ತಂಡವು ಹಾತಲಗೇರಿ ಸರ್ಕಾರಿ ಪ್ರೌಢಶಾಲೆ (ಖಒಖಂ)ಗೆ ವಿಶೇಷ ಭೇಟಿ ನೀಡಿತು.

ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಉನಿರ್ದೇಶಕ ಜಿ.ಎಂ. ಮುಂದಿನಮನಿ ನೇತೃತ್ವದಲ್ಲಿ ಉಪನ್ಯಾಸಕರಾದ ಎಸ್.ಆರ್. ನದಾಫ್, ಜಿ.ಡಿ. ದಾಸರ, ವಾಯ್.ಕೆ. ಹಂದ್ರಾಳ, ಸುಧಾ ಬನ್ನಿಕಲ್ ಹಾಗೂ ಹಿರಿಯ ಉಪನ್ಯಾಸಕರಾದ ಬಿ.ಎಫ್. ಅರವಟಗಿ ಉಪಸ್ಥಿತರಿದ್ದು, ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ಪ್ರಶ್ನೋತ್ತರಗಳ ಮೂಲಕ ಮಕ್ಕಳ ಆತ್ಮವಿಶ್ವಾಸ ಹೆಚ್ಚಿಸಿ, ಪರೀಕ್ಷೆಗೆ ಸಜ್ಜಾಗುವಂತೆ ಪ್ರೇರೇಪಿಸಿದರು.

ನಂತರ ತಂಡವು ಊರಿನ ಹಿರಿಯರು ಮತ್ತು ಶಿಕ್ಷಣ ಪ್ರೇಮಿಗಳೊಂದಿಗೆ ವಿದ್ಯಾರ್ಥಿಗಳ ಮನೆಗಳಿಗೆ ಭೇಟಿ ನೀಡಿ, ಮಕ್ಕಳ ಶೈಕ್ಷಣಿಕ ಪ್ರಗತಿ ಕುರಿತು ಪಾಲಕರೊಂದಿಗೆ ಚರ್ಚಿಸಿತು.

ಟಿ.ವಿ. ಮತ್ತು ಮೊಬೈಲ್ ಬಳಕೆ ನಿಯಂತ್ರಿಸಿ, ಜಾತ್ರೆ–ಹಬ್ಬಗಳಲ್ಲಿ ಕಾಲಹರಣ ಮಾಡದೆ ವೇಳಾಪಟ್ಟಿಯಂತೆ ಅಭ್ಯಾಸ ನಡೆಸುವಂತೆ ಸೂಚಿಸಲಾಯಿತು. ರಾಜ್ಯ ಮಟ್ಟದ 3ನೇ ಪೂರ್ವ ಸಿದ್ಧತಾ ಪರೀಕ್ಷೆಗೆ ಗಂಭೀರವಾಗಿ ತಯಾರಿ ನಡೆಸುವಂತೆ ಮಾರ್ಗದರ್ಶನ ನೀಡಲಾಯಿತು.

ಪರೀಕ್ಷಾ ಅವಧಿಯಲ್ಲಿ ವೈಯಕ್ತಿಕ ಆರೋಗ್ಯ ಕಾಪಾಡಿಕೊಳ್ಳುವುದು ಹಾಗೂ ಉಳಿದ 44 ದಿನಗಳನ್ನು ಕ್ರಿಯಾ ಯೋಜನೆಯಂತೆ ಸಮರ್ಪಕವಾಗಿ ಬಳಸಿಕೊಳ್ಳುವಂತೆ ಮಕ್ಕಳಿಗೆ ತಿಳಿಸಲಾಯಿತು. ಮನೆವಾರ್ಷಿಕ ಪರೀಕ್ಷೆಯನ್ನು ನಿರ್ಭಯವಾಗಿ ಎದುರಿಸಿ, 40+ ಗುರಿ ಸಾಧಿಸುವಂತೆ ವಿದ್ಯಾರ್ಥಿಗಳಿಗೆ ಉತ್ತೇಜನ ನೀಡಲಾಯಿತು.

ಈ ಸಂದರ್ಭದಲ್ಲಿ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಮುಖ್ಯೋಪಾಧ್ಯಾಯರು, ಶಿಕ್ಷಕರು, ಪಾಲಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಶಾಲೆಯ ಒಟ್ಟಾರೆ ಗುಣಾತ್ಮಕ ಫಲಿತಾಂಶ ಹೆಚ್ಚಿಸುವ ದಿಶೆಯಲ್ಲಿ ಈ ಮನೆ ಭೇಟಿ ಕಾರ್ಯಕ್ರಮ ಮಹತ್ವದ ಹೆಜ್ಜೆಯಾಗಿದೆ ಎಂದು ಅಭಿಪ್ರಾಯ ವ್ಯಕ್ತವಾಗಿದೆ.

## ಕೆ.ಸಿ.ಸಿ. ಬ್ಯಾಂಕ್ ಶಾಖೆಗಳ ಅಧಿಕಾರಿ–ಸಿಬ್ಬಂದಿಗಳಿಗೆ ರಾಜ್ಯ ಮಟ್ಟದ ವಿಶೇಷ ತರಬೇತಿ ಶಿಬಿರ

# ಆರ್.ಬಿ.ಐ ನಿಯಮಾವಳಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ತರಬೇತಿಯಿಂದ ನಮ್ಮಲ್ಲಿರುವ ಜ್ಞಾನವನ್ನು ಹೆಚ್ಚಿಸಿಕೊಂಡು ಅಜ್ಞಾನವನ್ನು ಹೋಗಲಾಡಿಸಿ ವೃತ್ತಿ ಕೌಶಲ್ಯಗಳನ್ನು ಬಳಸಿಕೊಂಡು ಬ್ಯಾಂಕಿನ ಸೌಲಭ್ಯಗಳನ್ನು ಗ್ರಾಹಕರಿಗೆ ಸಂಪೂರ್ಣವಾಗಿ ತಲುಪಿಸಬೇಕು. ಕೆಲಸ ನಿರ್ವಹಿಸುವಾಗ ಸಹಕಾರಿ ಕಾನೂನು, ಆರ್.ಬಿ.ಐ ಮತ್ತು ನಬಾರ್ಡ್ ನಿಯಮಾವಳಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕೆಂದು ಕೆ.ಸಿ.ಸಿ. ಬ್ಯಾಂಕ್ ಧಾರವಾಡದ ಅಧ್ಯಕ್ಷ ಶಿವಕುಮಾರಗೌಡ ಎಸ್.ಪಾಟೀಲ ಹೇಳಿದರು.

ಸಹಕಾರ ಇಲಾಖೆ ಗದಗ, ರಾಜ್ಯ ಸಹಕಾರ ಮಹಾಮಂಡಳ ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ಹಾಗೂ ಕೆ.ಸಿ.ಸಿ ಬ್ಯಾಂಕ್ ಧಾರವಾಡ ಇವರುಗಳ ಸಂಯುಕ್ತ ಆಶ್ರಯದಲ್ಲಿ ಗದಗ ಜಿಲ್ಲೆಯ ಕೆ.ಸಿ.ಸಿ. ಬ್ಯಾಂಕ್ ಶಾಖೆಗಳ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ ವಿಶೇಷ ತರಬೇತಿ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬ್ಯಾಂಕಿನ ಕಾರ್ಯವ್ಯಾಪ್ತಿಯಲ್ಲಿ ಒಟ್ಟು 559 ಸಂಘಗಳಿದ್ದು, ಅದರಲ್ಲಿ 1,82,500 ರೈತರಿಗೆ ಇಲ್ಲಿಯವರೆಗೆ ಬ್ಯಾಂಕಿನಿಂದ 58,453 ರೈತರಿಗೆ ಕೃಷಿ ಸಾಲ ರೂ. 447.37



ಕೋಟಿ, 850 ರೈತರಿಗೆ ರೂ. 50.87 ಕೋಟಿ ಮಧ್ಯಮಾವಧಿ ಸಾಲ, ರೂ. 585.55 ಕೋಟಿ ಕೃಷಿಯೇತರ ಸಾಲ ನೀಡಲಾಗಿದೆ ಎಂದು ತಿಳಿಸಿದರು.

ಗದಗ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಸಿ.ಎಂ. ಪಾಟೀಲ ಮಾತನಾಡುತ್ತಾ, ಇಂದಿನ ವೇಗದ ಜಗತ್ತಿನಲ್ಲಿ, ಆಜೀವ ಕಲಿಕೆಯ ಮನಸ್ಥಿತಿಯನ್ನು ಅಳವಡಿಸಿಕೊಳ್ಳುವುದು ಅತ್ಯಗತ್ಯ.. ವೇಗವಾಗಿ ಬದಲಾಗುತ್ತಿರುವ ಉದ್ಯೋಗ ಮಾರುಕಟ್ಟೆಯಲ್ಲಿ ಪ್ರಸ್ತುತವಾಗಿರಿ, ನಮ್ಮ ಸೃಜನಶೀಲತೆ ಮತ್ತು ನಾವೀನ್ಯತೆಯನ್ನು ಹೆಚ್ಚಿಸಿ, ನಮ್ಮ ಸಮಸ್ಯೆಯನ್ನು ಪರಿಹರಿಸುವ ಮತ್ತು ನಿರ್ಧಾರ ತೆಗೆದುಕೊಳ್ಳುವ ಕೌಶಲ್ಯಗಳನ್ನು ಸುಧಾರಿಸಿ, ನಮ್ಮ ವೃತ್ತಿಪರ ನೆಟ್‌ವರ್ಕ್‌ಗಳು ಮತ್ತು ಅವಕಾಶಗಳನ್ನು ವಿಸ್ತರಿಸಿ ಗ್ರಾಹಕರು, ಸಹೋದ್ಯೋಗಿಗಳು ಮತ್ತು ಸೃಷ್ಟಿಕರ್ತ (ದೇವರು)ರೊಂದಿಗೆ ಸಾಮರಸ್ಯಪೂರ್ಣ ಸಂಬಂಧವನ್ನು ನಿರ್ಮಿಸುವುದು ಸಹಕಾರ ಹಾಗೂ ಇತರೆ ಕ್ಷೇತ್ರದಲ್ಲಿ ಯಶಸ್ಸು ಸಾಧಿಸಲು ಅತ್ಯಗತ್ಯ ಎಂದು ಹೇಳಿದರು.

ಕೆ.ಸಿ.ಸಿ. ಬ್ಯಾಂಕ್ ಧಾರವಾಡದ ನಿರ್ದೇಶಕ ಗೋವಿಂದಗೌಡ ವ್ಹಿ.ಪಾಟೀಲ ಮಾತನಾಡಿ, ಸಹಕಾರಿ ಸಂಸ್ಥೆಗಳು ತಮ್ಮ ಕಾರ್ಯತಂತ್ರಗಳು, ಪ್ರಕ್ರಿಯೆಗಳು ಮತ್ತು ಕಾನೂನಾತ್ಮಕ ವಿಷಯಗಳನ್ನು ಅರಿತುಕೊಂಡು ನಮ್ಮನ್ನು ನಾವು ಮರು ಮೌಲ್ಯಮಾಪನ ಮಾಡಲು ಇದು ಉತ್ತಮ ಸಮಯ ಎಂದು ಹೇಳಿದರು.

ತರಬೇತಿ ಕಾರ್ಯಾಗಾರದಲ್ಲಿ ಮೈಸೂರಿನ ಕರ್ನಾಟಕ ಗ್ರಾಮೀಣ ಬ್ಯಾಂಕ್ ನಿವೃತ್ತ ಪ್ರಾದೇಶಿಕ ವ್ಯವಸ್ಥಾಪಕ ಸಿದ್ದರಾಮೇಗೌಡ, ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕ್‌ನ ವಿಶ್ರಾಂತ ವ್ಯವಸ್ಥಾಪಕ ಎಸ್.ಜಿ. ಕುಲಕರ್ಣಿ ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಸಹಕಾರ ಯೂನಿಯನ್ ಉಪಾಧ್ಯಕ್ಷ ವಾಯ್.ಎಫ್. ಪಾಟೀಲ, ಕೆ.ಸಿ.ಸಿ. ಬ್ಯಾಂಕಿನ ವಸೂಲಾಧಿಕಾರಿಯಾದ ಬಿ.ಬಿ. ನಾಯಕ, ಗದಗ ಜಿಲ್ಲಾ ನಿಯಂತ್ರಣಾಧಿಕಾರಿ ಎಸ್.ಎಂ. ಚಿಕ್ಕಮಠ, ಮರ್ಚಂಟ್ಸ್ ಲಿಬರಲ್ ಬ್ಯಾಂಕಿನ ಎಂ.ಡಿ ರಾಜು ಎಲ್. ಕೋಟಿ, ಮೃತ್ಯಂಜಯ ಹಿರೇಮಠ, ಗಂಗಮ್ಮ ಗದ್ದಿಗೌಡರ ಅವರು ಇದ್ದರು.

ಡಂಬಳ ಬಾಲಕಿಯರ ಪ್ರೌಢಶಾಲೆಯ ವಿದ್ಯಾರ್ಥಿನಿಯರಾದ ಸ್ನೇಹಾ ಹಾಗೂ ಸಂಗಡಿಗರು ಪ್ರಾರ್ಥನೆ ಹಾಗೂ ನಾಡಗೀತೆ ಹೇಳಿದರು ಕೆ.ಸಿ.ಸಿ. ಬ್ಯಾಂಕಿನ ಜಿ.ಎಂ ಎಸ್.ವ್ಹಿ. ಹೂಗಾರ ಸ್ವಾಗತಿಸಿದರು. ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಚಂದ್ರಶೇಖರ ಎಸ್.ಕರಿಯಪ್ಪನವರ ಕಾರ್ಯಕ್ರಮ ನಿರೂಪಿಸಿದರು. ಮಹಿಳಾ ಸಹಕಾರ ಶಿಕ್ಷಕಿ ಆರ್.ಸಿ. ಯಲಿಗಾರ ವಂದಿಸಿದರು.

### 10 ಲಕ್ಷ ಲೀ ಸಾಮರ್ಥ್ಯದ 2 ಜಲಾಗಾರ ನಿರ್ಮಾಣಕ್ಕೆ ಸ್ಥಳ ನಿಗದಿ

# ಉದ್ಯಾನದ ಸ್ಥಳದಲ್ಲಿ ಜಲಾಗಾರ ನಿರ್ಮಾಣ ಬೇಡ



ಈ ಕುರಿತು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಇಂಜಿನಿಯರ್ ಜೆ.ಬಿ. ಹೊಸಮನಿ ಅವರನ್ನು ಸಂಪರ್ಕಿಸಲಾಗಿದೆ. ಕುಡಿಯುವ ನೀರಿನ ಯೋಜನೆಯಡಿ ಲಕ್ಷ್ಮೇಶ್ವರದಲ್ಲಿ ನಿರ್ಮಾಣಗೊಳ್ಳಲಿರುವ 2 ಜಲಾಗಾರ ನಿರ್ಮಾಣದ ಸ್ಥಳ ಬದಲಾವಣೆಗೆ ನಾಗರಿಕರು ಮನವಿ ಮಾಡಿದ್ದು, ಪುರಸಭೆಯವರು ಕಾಮಗಾರಿಗೆ ಬದಲಿ ಸ್ಥಳ ಗುರುತಿಸಿಕೊಡಲು ಕೋರಿದ್ದೇವೆ ಎಂದಿದ್ದಾರೆ.



■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಪುರಸಭೆ ಕಲಾ ಮಹಾವಿದ್ಯಾಲಯ ಮತ್ತು ಈಶ್ವರ ನಗರದ ಉದ್ಯಾನವನ ಜಾಗೆಯಲ್ಲಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಕೈಗೊಳ್ಳುತ್ತಿರುವ ಜಲಾಗಾರ ನಿರ್ಮಾಣ ಕಾಮಗಾರಿಯ ಸ್ಥಳ ಬದಲಾವಣೆ ಮಾಡಬೇಕು ಎಂಬುದು ನಾಗರಿಕರು ಒತ್ತಾಯಿಸಿದ್ದಾರೆ.

ತುಂಗಭದ್ರಾ ನದಿಯಿಂದ ಪಟ್ಟಣಕ್ಕೆ ಕುಡಿಯುವ ನೀರು ಸರಬರಾಜಾಗುವ ಯೋಜನೆಯ ಸುಧಾರಣೆಗಾಗಿ ಒಟ್ಟು 36 ಕೋಟಿ ರೂ ವೆಚ್ಚದ ಈ ಕಾಮಗಾರಿಯನ್ವಯ ಪಟ್ಟಣದಲ್ಲಿ 10 ಲಕ್ಷ ಲೀ ಸಾಮರ್ಥ್ಯದ 2 ಜಲಾಗಾರ ನಿರ್ಮಾಣದ ಕೆಲಸವಿದೆ. ಪುರಸಭೆಯವರು ಈಗಾಗಲೇ ಪಟ್ಟಣದ ಪುರಸಭೆಯ ಕಲಾ ಮಹಾವಿದ್ಯಾಲಯದ ಆವರಣದಲ್ಲಿ ಹಾಗೂ ಈಶ್ವರ ನಗರದ ಉದ್ಯಾನವನದಲ್ಲಿ ನಿರ್ಮಾಣ ಮಾಡಲು ಗುತ್ತಿಗೆದಾರರಿಗೆ ಸ್ಥಳದ ಪರವಾನಗಿ ನೀಡಿದ್ದಾರೆ.

ಈ ಹಿನ್ನೆಲೆಯಲ್ಲಿ ಗುತ್ತಿಗೆದಾರರು ಕಾಮಗಾರಿ ಸ್ಥಳದಲ್ಲಿನ ಗಿಡ-ಮರಗಳನ್ನು ತೆರವುಗೊಳಿಸಿದ್ದಾರೆ. ತಗಡಿನ ಶೆಡ್ ನಿರ್ಮಾಣ, ಕಬ್ಬಿಣ, ಮರಳು, ಖಡಿ ಇತರೇ ಸಾಮಗ್ರಿಗಳನ್ನು ಸಂಗ್ರಹಿಸಿ ಕಾಮಗಾರಿಗೆ ಚಾಲನೆ ನೀಡಿದ್ದಾರೆ. ಇದೀಗ ಈಶ್ವರ ನಗರದ ನಿವಾಸಿಗಳು ಪುರಸಭೆ ಮತ್ತು ಜಿಲ್ಲಾಧಿಕಾರಿಗಳಿಗೆ ಉದ್ಯಾನದ ಜಾಗದಲ್ಲಿ ಜಲಾಗಾರ ನಿರ್ಮಾಣ ಬೇಡ, ಈಶ್ವರ ನಗರ, ಲಕ್ಷ್ಮೀನಗರ, ಅಗ್ನಿಸೋಮೇಶ್ವರ ನಗರದ ನೂರಾರು ಕುಟುಂಬಗಳಿಗೆ ಇರುವುದೊಂದೇ ಉದ್ಯಾನ. ಈ ಪ್ರದೇಶದಲ್ಲಿ ನಿವೃತ್ತ ನೌಕರರು, ಮಾಜಿ ಯೋಧರು, ನೌಕರ ವರ್ಗದವರೇ ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಅಲ್ಲದೇ ನಿವಾಸಿಗಳೆಲ್ಲರೂ ಸೇರಿ ಹಣ ಸಂಗ್ರಹಿಸಿ ಉದ್ಯಾನ ಸುಧಾರಣೆ ಕಾರ್ಯ ಮಾಡಿಕೊಂಡಿದ್ದೇವೆ. ಹಿರಿಯರು, ಮಕ್ಕಳಿಗೆ ಅನಕೂಲವಾದ ಉದ್ಯಾನದ ಜಾಗೆಯಲ್ಲಿ ಜಲಾಗಾರ ನಿರ್ಮಾಣ ಬೇಡ ಎಂದು ಇಲ್ಲಿನ ಹಿರಿಯರಾದ ಪರಮೇಶ್ವರ ಕಳಶೆಟ್ಟಿ, ನಿವೃತ್ತ ಸೈನಿಕ ಹನಮಂತ ಶೀಲವಂತರ ಸೇರಿ ನಾಗರಿಕರೆಲ್ಲರೂ ಒಕ್ಕೊರಲಿಂದ ಮನವಿ ಮಾಡಿದ್ದಾರೆ.

ಪುರಸಭೆ ಕಲಾ ಮಹಾವಿದ್ಯಾಲಯಕ್ಕೆ ನೂರಾರು ವರ್ಷಗಳ ಇತಿಹಾಸವಿದೆ. ಕಾಲೇಜು ಕಟ್ಟಡ ಸೇರಿ ಇರುವುದು ಕೇವಲ 2 ಎಕರೆ 17 ಗುಂಟೆ ಮಾತ್ರ. ಇರುವ ಖಾಲಿ ಜಾಗದಲ್ಲಿ ಟ್ಯಾಂಕ್ ನಿರ್ಮಾಣಗೊಂಡರೆ ಕ್ರೀಡೆ ಸೇರಿದಂತೆ ಇತರೇ ಪಠ್ಯೇತರ ಚಟುವಟಿಕೆಗಳಿಗೆ ಜಾಗವೇ ಇಲ್ಲದಂತಾಗುತ್ತದೆ. ಅಲ್ಲದೇ ಮುಖ್ಯವಾಗಿ ಈಗಾಗಲೇ ಈ ಕಾಲೇಜನ್ನು ಸರ್ಕಾರಕ್ಕೆ ಹಸ್ತಾಂತರಿಸುವ ಪ್ರಕ್ರಿಯೆ ಸರ್ಕಾರದ ಮಟ್ಟದಲ್ಲಿ ಅಂತಿಮ ಹಂತದಲ್ಲಿದ್ದು, ಗ್ರೀನ್ ಸಿಗ್ನಲ್‌ಗೆ ಕಾದಿದೆ. ಈಗಾಗಲೇ ಕಾಲೇಜು ಆವರಣದಲ್ಲಿ ಹವಾಮಾನ ಮಾಪಕ ಕೇಂದ್ರ ನಿರ್ಮಿಸಲಾಗಿದೆ. ಈ ಕುರಿತು ಕಾಲೇಜಿನ ಪ್ರಾಚಾರ್ಯರು ಸಹ ಅಸಹಾಯಕತೆ ವ್ಯಕ್ತಪಡಿಸಿದ್ದಾರೆ. ಕುಡಿಯುವ ನೀರಿನ ಕಾಮಗಾರಿ ಅತ್ಯವಶ್ಯ. ಆದರೆ ಈ ಜಾಗದಲ್ಲಿ ಜಲಾಗಾರ ನಿರ್ಮಾಣವಾದಲ್ಲಿ ಭವಿಷ್ಯದಲ್ಲಿ ಕಾಜೇಜಿನ ಅಭಿವೃದ್ಧಿಗೆ ಸಾಕಷ್ಟು ಅಡ್ಡಿಯಾಗಲಿದೆ. ಒಂದು ವೇಳೆ ಕಾಮಗಾರಿ ಸ್ಥಳಾಂತರಿಸದಿದ್ದರೆ ಕಾಲೇಜಿನ ಹಳೇ ವಿದ್ಯಾರ್ಥಿಗಳೆಲ್ಲರೊಡಗೂಡಿ ವಿರೋಧಿಸುತ್ತೇವೆ ಎಂದು ಚನ್ನಪ್ಪ ಜಗಲಿ ಹೇಳಿದ್ದಾರೆ.

# ಹೋಮ ಹವನಗಳಿಗೆ ವೈಜ್ಞಾನಿಕ ಹಿನ್ನೆಲೆಯಿದೆ



■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಧಾರ್ಮಿಕ ಕಾರ್ಯಗಳಲ್ಲಿ ನೆರವೇರಿಸುವ ಹೋಮ-ಹವನಗಳಿಗೆ ವೈಜ್ಞಾನಿಕ ಹಿನ್ನೆಲೆ ಇದೆ. ಅದನ್ನು ಸರಿಯಾಗಿ ಅರ್ಥ ಮಾಡಿಕೊಂಡು ಹೋಮ-ಹವನಗಳನ್ನು ನೆರವೇರಿಸಿದರೆ ಮುಂಬರುವ ಅನೇಕ ನಷ್ಟಗಳನ್ನು ತಪ್ಪಿಸಬಹುದು ಎಂದು ಅರುಣ ಜಿ.ಕುಲಕರ್ಣಿ(ಕುರಗಡ್ಡಿ) ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ನಡೆದಿರುವ 116ನೇ ವರ್ಷದ ಶ್ರೀ ಗುರುಪ್ರತಿಪದೆ ಉತ್ಸವದ ಅಂಗವಾಗಿ ಸೋಮವಾರ ಜರುಗಿದ ಲಘುರುದ್ರ ಸ್ವಾಹಾಕಾರ ಹೋಮದ ಪೂರ್ಣಾಹುತಿ ನಂತರ ಅವರು ಮಾತನಾಡಿದರು.

ನರೇಗಲ್ಲದ ಶ್ರೀ ದತ್ತಾತ್ರೆಯ ದೇವಸ್ಥನಕ್ಕೆ ನೂರಾರು ವರ್ಷಗಳ ಇತಿಹಾಸವಿದೆ. ಶ್ರೀ ಗುರುಪ್ರತಿಪದೆ ಉತ್ಸವವು ಯಾವುದೇ ವಿಘ್ನವಿಲ್ಲದೆ 116 ವರ್ಷಗಳವರೆಗೆ ಸಾಗಿ ಬಂದಿರುವುದು ಶ್ರೀ ಗುರು ದತ್ತಾತ್ರೇಯನ ಆಶೀರ್ವಾದವೇ ಕಾರಣ. ಲಘುರುದ್ರ ಸ್ವಾಹಾಕಾರ ಹೋಮವು ವಿಶೇಷವಾಗಿ ರುದ್ರ ದೇವರಿಗೆ ಪ್ರೀತಿಯ ಹೋಮವಾಗಿದೆ. ಇದರಿಂದ ಕಾಲಕಾಲಕ್ಕೆ ಮಳೆ-ಬೆಳೆಗಳು ಆಗಿ ದೇಶವು ಸುಭಿಕ್ಷವಾಗುತ್ತದೆ. ಅಷ್ಟೇ ಅಲ್ಲದೆ ಜನರೂ ಕೂಡ ಶಾಂತಿ, ನೆಮ್ಮದಿಯಿಂದ ಇರಲು ಸಹಕಾರಿಯಾಗಿದೆ ಎಂದರು.

ಡಾ. ಕೃಷ್ಣಾ ಕಾಳೆ ದಂಪತಿಗಳು ಲಘುರುದ್ರ ಸ್ವಾಹಾಕಾರದ ಭಕ್ತಿಸೇವೆಯನ್ನು ವಹಿಸಿದ್ದರು. ವಿ.ಆರ್. ಗ್ರಾಮಪುರೋಹಿತ ಹೋಮದ ನೇತೃತ್ವ ವಹಿಸಿದ್ದರು. ಅರ್ಚಕ ಶ್ರೀವಲ್ಲಭಭಟ್ಟ ಸದರಜೋಷಿ, ಉಪಾಧ್ಯಕ್ಷ ಆದರ್ಶ ಕುಲಕರ್ಣಿ, ಕಾರ್ಯದರ್ಶಿ ರಘುನಾಥ ಕೊಂಡಿ, ಎಸ್.ಎಚ್. ಕುಲಕರ್ಣಿ, ಅರುಣ ಕುಲಕರ್ಣಿ, ಅರುಣ ಗ್ರಾಮಪುರೋಹಿತ, ನಾಗೇಶಭಟ್ ಗ್ರಾಮಪುರೋಹಿತ, ಅಜಿತ ಕುಲಕರ್ಣಿ, ನಾಗರಾಜ ನಾಡಗೇರ, ಸೋಮನಾಥ ಗ್ರಾಮಪುರೋಹಿತ, ಪ್ರಶಾಂತ ಗ್ರಾಮಪುರೋಹಿತ, ಶ್ರೀಧರ ಗ್ರಾಮಪುರೋಹಿತ, ಜಗದೀಶ ಜ್ಯೋಷಿ, ಅಭಿಷೇಕ ಜೋಷಿ, ರಾಮಚಂದ್ರ ಕುಲಕರ್ಣಿ, ಹರೀಶ ಕುಲಕರ್ಣಿ, ಸುಮಂತ ಕುಲಕರ್ಣಿ, ರಾಮಕೃಷ್ಣ ಸದರಜೋಶಿ, ಪವನ ಗ್ರಾಮಪುರೋಹಿತ, ಅನುಪ ಕುಲಕರ್ಣಿ ಮುಂತಾದವರಿದ್ದರು.

### ಪತ್ರಿಕಾಗೋಷ್ಠಿಯಲ್ಲಿ ಮುಖಂಡರ ಸ್ಪಷ್ಟೀಕರಣ

# ಸ್ಥಳೀಯರಿಂದ ಇಟ್ಟಿಗೆರೆ ಅತಿಕ್ರಮಣವಾಗಿಲ್ಲ




■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದಲ್ಲಿ ಉಳಿದಿರುವ ಏಕೈಕ ಇಟ್ಟಿಗೆರೆ ಕೆರೆಯಂಚಿನ ಪಶ್ಚಿಮ ಭಾಗದಲ್ಲಿರುವ ನಿವಾಸಿಗಳಿಂದ ಕೆರೆಯ ಜಾಗ ಅತಿಕ್ರಮಣವಾಗಿಲ್ಲ. ಕೆಲ ನಿವಾಸಿಗಳು ಅತಿಕ್ರಮಣ ಮಾಡಿಕೊಂಡಿದ್ದಾರೆ ಎಂದು ವೃಥಾ ಆರೋಪಿಸಲಾಗುತ್ತಿದೆ. ಕೆರೆಯು ಯಾವ ದಿಕ್ಕಿನಲ್ಲಿ ಅತಿಕ್ರಮಣವಾಗಿದೆಯೋ ಅದನ್ನು ತಕ್ಷಣವೇ ತೆರವುಗೊಳಿಸಿ, ಕೈಗೊಂಡಿರುವ ಕೆರೆ ಅಭಿವೃದ್ಧಿ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಬೇಕು ಎಂದು ಸ್ಥಳೀಯ ನಿವಾಸಿಗಳು ಮನವಿ ಮಾಡಿದರು. ಈ ಕುರಿತು ಸೋಮವಾರ ಪತ್ರಿಕಾ ಕಾರ್ಯಾಲಯದಲ್ಲಿ ಕೆರೆಗೆ ಸಂಬಂಧಿಸಿದ ಎಲ್ಲ ದಾಖಲೆಗಳ ಸಮೇತ ಸ್ಪಷ್ಟೀಕರಣ ನೀಡಿದ ಶಂಕರ ಬ್ಯಾಡಗಿ, ಸಿದ್ದಲಿಂಗಯ್ಯ ಹಿರೇಮಠ ಮುಂತಾದ ಪ್ರಮುಖರು, ಈಗಿನ ಮಾಹಿತಿ ಪ್ರಕಾರ 12 ಎಕರೆ 30 ಗುಂಟೆ ಕೆರೆಯ ಮೂಲ ಪ್ರದೇಶವಾಗಿದ್ದು, ಈಗ ಉಳಿದಿರುವುದು 10 ಎಕರೆ 11 ಗುಂಟೆ ಮಾತ್ರ. 2015-16ರಲ್ಲಿ 50 ಲಕ್ಷ ರೂ ವೆಚ್ಚದಲ್ಲಿ ದಕ್ಷಿಣ ಭಾಗದಲ್ಲಿ ಖಾಸಗಿ ಲೇಔಟ್‌ಗೆ ದಾರಿ ಮಾಡಿಕೊಡುವ ದುರುದ್ದೇಶದಿಂದ 13 ಗುಂಟೆ ಜಾಗ ಬಿಟ್ಟು 20 ಗುಂಟೆ ಜಾಗದಲ್ಲಿ ಬಂಡ್ ಹಾಕಿದ್ದಾರೆ. 2016-17ರಲ್ಲಿ ಮತ್ತೆ ಪುರಸಭೆಯ ಅಂದಾಜು 50 ಲಕ್ಷ ರೂ ವೆಚ್ಚದಲ್ಲಿ ಪೂರ್ವ ಭಾಗದಲ್ಲಿ 17 ಗುಂಟೆ ಜಾಗದಲ್ಲಿ ರಸ್ತೆ ನಿರ್ಮಾಣ ಮಾಡಲಾಗುತ್ತದೆ. ಈ ಕಾಮಗಾರಿಗಳು ಅನಧಿಕೃತವಾಗಿವೆ ಎಂದು ಆರೋಪಿಸಿದರು.

ಈ ಭಾಗದಲ್ಲಿನ ಒತ್ತುವರಿ ತೆರವುಗೊಳಿಸಿದರೆ ಕೆರೆ ವಿಸ್ತಾರ ಹೆಚ್ಚಲಿದೆ. 2022ರಲ್ಲಿ ಅತಿಯಾದ ಮಳೆಯಿಂದ ಕೆರೆಯಂಚಿನ ಪಶ್ಚಿಮ ಭಾಗದ ಮನೆಗಳು ಜಲಾವೃತಗೊಂಡಿದ್ದವು. ಈ ವೇಳೆ ಜಿಲ್ಲಾಧಿಕಾರಿಗಳು ಸ್ಥಳ ಪರಿಶೀಲಿಸಿದ ಸಂದರ್ಭದಲ್ಲಿ ಈ ಭಾಗದ ಕೆರೆಯಂಚಿಗೆ ಬಂಡ್ ನಿರ್ಮಾಣ ಮಾಡಲು ಮನವಿ ಮಾಡಲಾಗಿತ್ತು. ಇದೀಗ 50 ಲಕ್ಷ ರೂ ವೆಚ್ಚದಲ್ಲಿ ಕೆರೆ ಅಭಿವೃದ್ಧಿ ಪ್ರಾಧಿಕಾರದ ಪರವಾನಗಿಯೊಂದಿಗೆ ಬಂಡ್ ನಿರ್ಮಾಣ ಕಾಮಗಾರಿ ಅರ್ಧಕ್ಕೆ ನಿಲ್ಲಿಸಲಾಗಿದೆ. ಈ ಕಾಮಗಾರಿಯಲ್ಲಿ ಕೆರೆಗೆ ನೀರು ಹರಿದು ಬರುವ ಮತ್ತು ಹೆಚ್ಚುವರಿ ನೀರು ಹೊರ ಹೋಗಲು ಪೈಪ್ ಅಳವಡಿಸುವ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿಗಳು ಗುತ್ತಿಗೆದಾರರಿಗೆ ನಿರ್ದೇಶನ ನೀಡಬೇಕು ಎಂಬುದು ನಿವಾಸಿಗರ ಒಕ್ಕೊರಲ ಒತ್ತಾಸೆಯಾಗಿದೆ ಎಂದು ತಿಳಿಸಿದರು.

ಈ ವೇಳೆ ಮಂಜುನಾಥ ಶರಸೂರಿ, ಶರಣಪ್ಪಗೌಡ ಚಿಕ್ಕನಗೌಡ್ರ, ಪವನ ಬಂಕಾಪೂರ, ಸಿಂದೋಗೆಪ್ಪ ಮುಳಗುಂದ, ಹನುಮಂತಪ್ಪ ಬಂಕಾಪೂರ ಮತ್ತಿತರರಿದ್ದರು.

### ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಅವಧೂತ ಪರಂಪರೆಯ ಕುರಿತು ವಿಶೇಷ ಉಪನ್ಯಾಸ

# ಬದುಕಿನ ಬಗ್ಗೆ ಯಾರಿಗೂ ಖಾತ್ರಿಯಿಲ್ಲ

■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮನುಷ್ಯ ತನ್ನ ಜೀವನದ ಕೊನೆಯ ಕ್ಷಣದವರೆಗೂ ಭಗವಂತನ ಸ್ಮರಣೆ ಮಾಡಬೇಕು. ಜೀವನ ಅತ್ಯಂತ ಕ್ಷಣಿಕ. ಆದ್ದರಿಂದ ನಾಮಸ್ಮರಣೆಯಲ್ಲಿ ಕಾಲ ಕಳೆಯಿರಿ ಎಂದು ಗದಗ ತಾಲೂಕಾ ಬ್ರಾಹ್ಮಣ ಸಂಘದ ಅಧ್ಯಕ್ಷ ದತ್ತಣ್ಣ ಜೋಷಿ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ನಡೆದಿರುವ ಶ್ರೀ ಗುರುಪ್ರತಿಪದೆ ಉತ್ಸವದಲ್ಲಿ ಅವರು ಅವಧೂತ ಪರಂಪರೆಯ ಬಗ್ಗೆ ವಿಶೇಷ ಉಪನ್ಯಾಸ ನೀಡಿದರು.

ಶ್ರೀ ಗುರು ದತ್ತಾತ್ರೇಯ ಈ ಜಗತ್ತಿಗೆ ಸಕಲ ವಿದ್ಯೆಯನ್ನು ಧಾರೆಯೆರೆದ ಭಗವಂತನಾಗಿದ್ದಾನೆ. ಮಾನವ ಜನ್ಮ ಅತ್ಯಂತ ಶ್ರೇಷ್ಠವಾಗಿದ್ದು, ಮಾನವರಿಗೆ ಗುರು ಪರಂಪರೆಯ ಶ್ರೇಷ್ಠತೆಯನ್ನು ತಿಳಿಸಲು ಈ ಭೂಮಿಯ ಮೇಲೆ ಶ್ರೀ ದತ್ತಾವತಾರವಾಗಿದೆ. ಜೀವನದ ಎಲ್ಲ ವಿದ್ಯೆಗಳನ್ನೂ ಮೊದಲು ತಿಳಿಸಿಕೊಟ್ಟವನೇ ಶ್ರೀ ಗುರುದತ್ತ ಎಂದರು. ಬದುಕಿನ ಬಗ್ಗೆ ಯಾರಿಗೂ ಖಾತ್ರಿಯಿಲ್ಲ. ಮಗುವು ಗರ್ಭಾವಸ್ಥೆಯಲ್ಲಿರುವಾಗಲೇ ಸಂಸ್ಕಾರ ನೀಡುವ ಸಂಸ್ಕೃತಿ ನಮ್ಮದು. ಈ ಸಂಸ್ಕಾರವನ್ನು ಮನುಷ್ಯ ತನ್ನ ಜೀವನದುದ್ದಕ್ಕೂ ಅಳವಡಿಸಿಕೊಂಡು ಬಂದರೆ ಅವನ ಜೀವನ ಸಾರ್ಥಕವಾಗುತ್ತದೆ. ಜೀವನದಲ್ಲಿ ಏನೇ ಸಿಕ್ಕರೂ ಮನುಷ್ಯನಿಗೆ ಸಮಾಧಾನವಿಲ್ಲ. ಮನುಷ್ಯನ ವ್ಯಕ್ತಿತ್ವದ ವಿಕಸನವಾಗದೆ ಅವನು ಎತ್ತರಕ್ಕೆ ಬೆಳೆಯಲು ಸಾಧ್ಯವಿಲ್ಲ. ರಾಮಾಯಣ-ಮಹಾಭಾರತಗಳನ್ನು ಮಕ್ಕಳಿಗೆ ಕಂಠಪಾಠ ಮಾಡಿಸದೆ ಅದರಲ್ಲಿನ ಪಾತ್ರಗಳ ಸತ್ವವನ್ನು ಮಕ್ಕಳಿಗೆ ಅರ್ಥ ಮಾಡಿಸಬೇಕೆಂದರು.



ಶಿವಸೇನಾದ ರಾಜ್ಯ ಪ್ರಧಾನ ಕಾರ್ಯದರ್ಶಿ ಗಂಗಾಧರ ಕುಲಕರ್ಣಿ ಮಾತನಾಡಿ, ಕಾಶ್ಮೀರಿ ಪಂಡಿತರ ಧೈರ್ಯ ಎಲ್ಲ ಬ್ರಾಹ್ಮಣರಲ್ಲಿಯೂ ಬರಬೇಕು. ನಮ್ಮ ಸಮಾಜದ ಮೇಲೆ ಅನಾವಶ್ಯಕವಾಗಿ ತೊಂದರೆಗಳಾಗುತ್ತಿವೆ. ಇದನ್ನು ನಾವು ಧೈರ್ಯದಿಂದ ಎದುರಿಸಬೇಕು. ಬ್ರಾಹ್ಮಣ ಸೈನಿಕರು ಯುದ್ಧಗಳಲ್ಲಿ ಸಾಕಷ್ಟು ಹೋರಾಟ ಮಾಡಿ ಪ್ರಾಣಗಳನ್ನು ತೆತ್ತಿದ್ದಾರೆ. ಅಂದರೆ ದೇಶ ಸೇವೆಯಲ್ಲಿಯೂ ಬ್ರಾಹ್ಮಣರ ಕೊಡುಗೆ ಅಪಾರವಾಗಿದೆ. ಎಂದಿಗೆ ಈ ದೇಶದಲ್ಲಿ ಬ್ರಾಹ್ಮಣರ ನಾಶವಾಗುತ್ತದೆಯೋ ಅಂದಿಗೆ ಜಗತ್ತೇ ಕೊನೆಗೊಳ್ಳುತ್ತದೆ. ಅದಕ್ಕಾಗಿ ನಾವೆಲ್ಲರೂ ಒಗ್ಗಟ್ಟಾಗಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಡಾ. ಜಿ.ಕೆ. ಕಾಳೆ ಮಾತನಾಡಿ, ನಾವೀಗ ಗೋಡೆ ಹತ್ತುವವರೆಗೂ ಸರಿದಿದ್ದೇವೆ. ಇನ್ನು ಸರಿಯೆಂದರೆ ಸರಿಯಲು ಸಾಧ್ಯವಾಗುವುದಿಲ್ಲ. ಆದ್ದರಿಂದ ನಮಗೆ ತೊಂದರೆ ಕೊಡಬೇಕೆನ್ನುವವರು ಇನ್ನಾದರೂ ಯೋಚಿಸಬೇಕೆಂದರು.

ವೀಣಾ ಕುಲಕರ್ಣಿ ಪ್ರಾರ್ಥಿಸಿದರು. ಕಿರಣ ಕಾಳೆ ಸ್ವಾಗತಿಸಿದರು. ಆದರ್ಶ ಕುಲಕರ್ಣಿ ನಿರೂಪಿಸಿದರು. ರಘುನಾಥ ಕೊಂಡಿ ವಂದಿಸಿದರು.

# ದಿಕ್ಕು-ದೆಸೆಯಿಲ್ಲದ ಕೇಂದ್ರ ಬಜೆಟ್



■ **ವಿಜಯಸಾಕ್ಷಿ ಸುದ್ದಿ, ಗದಗ**

ಬಜೆಟ್ ಅಂದ ತಕ್ಷಣ ಉತ್ಸಾಹ, ಉಲ್ಲಾಸ, ವಿಶ್ವಾಸ ಎಲ್ಲ ವರ್ಗದಲ್ಲಿಯೂ ಮೂಡಬೇಕು. ಆದರೆ ಈ ಬಾರಿಯ ಕೇಂದ್ರ ಬಜೆಟ್‌ನಲ್ಲಿ ಮಧ್ಯಮ ವರ್ಗದವರನ್ನು ಕಡೆಗಣಿಸಲಾಗಿದೆ. ಸಾಲ ಮಾಡುವ ಯೋಜನೆ ಹೊಂದಿದ್ದು, ನಮ್ಮ ಭಾರತ ಜಿಡಿಪಿ ಬಗ್ಗೆ ಕಾಳಜಿಯೇ ಇಲ್ಲ ಎಂದು ಕೆಪಿಸಿಸಿ ಗದಗ ಜಿಲ್ಲಾ ಅಲ್ಪಸಂಖ್ಯಾತ ಘಟಕದ ಜಿಲ್ಲಾಧ್ಯಕ್ಷ ಉಮರ ಫಾರೂಕ ಹುಬ್ಬಳ್ಳಿ ಖಂಡಿಸಿದ್ದಾರೆ. ಬಜೆಟ್‌ನಿಂದ ಶೇರು ಮಾರುಕಟ್ಟೆಯಲ್ಲಿ ಇಳಿಕೆಯಾಗುತ್ತಿದೆ.

ಬಡವರು, ಬೀದಿ ಬದಿ ವ್ಯಾಪಾರಿಗಳಿಗೆ ಜೀವನೋಪಾಯ ಹಾಗೂ ಸಾಮಾಜಿ ಭದ್ರತೆಗೆ ಸಂಬಂಧಿಸಿದಂತೆ ನಿರ್ದಿಷ್ಟ ಯೋಜನೆಗಳಿಗೆ ಯಾವುದೇ ಹಣವಿಲ್ಲ, ಮಧ್ಯಮ ವರ್ಗದವರಿಗೆ ಮಣ್ಣು, ಬಂಡವಾಳ ಹೂಡಿಕೆದಾರರಿಗೆ ಹೆದರಿ ಹೃದಯಾಘಾತಕ್ಕೆ ಒಳಗಾಗುವಂತೆ ಇರುವ ದಿಕ್ಕು-ದೆಸೆಯಿಲ್ಲದ ಬಜೆಟ್ ಇದಾಗಿದೆ ಎಂದಿದ್ದಾರೆ.

# ಕಡಲೆ ಖರೀದಿ ಕೇಂದ್ರ ಸ್ಥಾಪನೆಗೆ ಆದೇಶ

■ **ವಿಜಯಸಾಕ್ಷಿ ಸುದ್ದಿ, ಗದಗ**

ಪ್ರತಿ ರೈತರಿಂದ 1 ಎಕರೆಗೆ 4 ಕ್ವಿಂಟಲ್‌ನಂತೆ ಒಟ್ಟು 40 ಕ್ವಿಂಟಲ್ ಕಡಲೆಯನ್ನು 5875 ರೂ.ಗಳಿಗೆ ಖರೀದಿಸಲು ಖರೀದಿ ಕೇಂದ್ರವನ್ನು ತೆರೆಯುವಂತೆ ರಾಜ್ಯ ಸರ್ಕಾರ ಆದೇಶ ಹೊರಡಿಸಿರುವುದು ಸ್ವಾಗತಾರ್ಹವಾಗಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವಿ.ಆರ್. ನಾರಾಯಣರೆಡ್ಡಿ ಬಣದ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ಸಂತಸ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಈ ಹಿಂದೆ ಯಲ್ಲಪ್ಪ ಬಾಬರಿ ಹಾಗೂ ಅಂದಪ್ಪ ಕೂಳೂರು ಇವರ ನೇತೃತ್ವದಲ್ಲಿ ಗದಗ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಮನವಿ ಸಲ್ಲಿಸಲಾಗಿತ್ತು. ಇದರ ಫಲವಾಗಿ ಸಿಎಂ ಸಿದ್ದರಾಮಯ್ಯ ಅವರು ಕ್ಯಾಬಿನೆಟ್ ಸಭೆಯಲ್ಲಿ ಮಹತ್ವದ ಆದೇಶ ನೀಡಿದ್ದು, ರಾಜ್ಯದ ಎಲ್ಲಾ ರೈತರಿಗೂ ಸಂತೋಷ ತಂದಿದೆ ಎಂದು ತಿಳಿಸಿದ್ದಾರೆ.

# ಗ್ರಾಮ ಪಂಚಾಯಿತಿಗಳಿಗೆ ಆಡಳಿತಾಧಿಕಾರಿಗಳ ನೇಮಕ



■ **ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಈ ಕುರಿತು ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಗ್ರಾಮ ಪಂಚಾಯಿತಿಗಳಿಗೆ ಆಡಳಿತಾಧಿಕಾರಿಯಾಗಿ ನೇಮಕ ಆಗಿರುವ ಅಧಿಕಾರಿಗಳು ಶೀಘ್ರವೇ ಪ್ರಭಾರ ವಹಿಸಿಕೊಳ್ಳಬೇಕು. ವಿಳಂಬವಾದಲ್ಲಿ ಕಠಿಣ ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದ್ದಾರೆ.

ತಾಲೂಕಿನ ವ್ಯಾಪ್ತಿಯಲ್ಲಿನ ಗ್ರಾಮ ಪಂಚಾಯಿತಿಗಳಲ್ಲಿ 2020-2025ನೇ ಸಾಲಿಗೆ ರಚಿತವಾಗಿದ್ದ ಅಧಿಕಾರಾವಧಿಯು 2026ರ ಜನವರಿ ಅಂತ್ಯಕ್ಕೆ ಮುಕ್ತಾಯಗೊಂಡಿದ್ದು, ಜ. 30ರಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಗ್ರಾಮ ಪಂಚಾಯಿತಿಗಳಿಗೆ ಆಡಳಿತಾಧಿಕಾರಿಗಳನ್ನು ನೇಮಿಸಿ ಕರ್ತವ್ಯಗಳನ್ನು ನಿರ್ವಹಿಸುವಂತೆ ಆದೇಶ ಹೊರಡಿಸಿದ್ದಾರೆ.

ಶಿರಹಟ್ಟಿ ತಾಲೂಕಿನ ಬನ್ನಿಕೊಪ್ಪ ಮತ್ತು ರಣತೂರ ಗ್ರಾ.ಪಂಗಳಿಗೆ ಸಹಾಯಕ ನಿರ್ದೇಶಕ (ಕೃಷಿ ಇಲಾಖೆ), ಬೆಳ್ಳಟ್ಟಿ ಮತ್ತು ಹೆಬ್ಬಾಳ ಗ್ರಾ.ಪಂಗಳಿಗೆ ಸಹಾಯಕ ನಿರ್ದೇಶಕ, ಅಕ್ಷರದಾಸೋಹ ಕಾರ್ಯಕ್ರಮ, ಛಬ್ಬಿ ಮತ್ತು ಕೋಗನೂರ ಗ್ರಾ.ಪಂಗಳಿಗೆ ತಾಲೂಕಾ ರೇಷ್ಮೆ ವಿಸ್ತರಣಾಧಿಕಾರಿ, ಇಟಗಿ ಮತ್ತು ವಡವಿ ಗ್ರಾ.ಪಂಗಳಿಗೆ ಶಿಶು ಅಭಿವೃದ್ಧಿ ಯೋಜನಾಧಿಕಾರಿ, ಕಡಕೋಳ ಮತ್ತು ಮಜ್ಜೂರು ಗ್ರಾ.ಪಂಗಳಿಗೆ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ, ಕೊಂಚಿಗೇರಿ ಮತ್ತು ಮಾಗಡಿ ತಾ.ಪಂ ಸಹಾಯಕ ನಿರ್ದೇಶಕ-ಸಮಾಜ ಕಲ್ಯಾಣ ಇಲಾಖೆ, ಮಾಚೇನಹಳ್ಳಿ ಮತ್ತು ತಾರೀಕೊಪ್ಪ ಗ್ರಾ.ಪಂಗಳಿಗೆ ತಾಲೂಕಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಯನ್ನು ಗ್ರಾಮ ಪಂಚಾಯತಿಯ ಆಡಳಿತಾಧಿಕಾರಿಯನ್ನಾಗಿ ನೇಮಕ ಮಾಡಿದ್ದಾರೆ.

ಶಿರಹಟ್ಟಿ ತಾಲೂಕು ಪಂಚಾಯತಿಗೆ ಜಿಲ್ಲಾ ಪಂಚಾಯಿತಿ ಸಿಪಿಓ ಎ.ಎ. ಕಂಬಾಳಿಮಠ ಆಡಳಿತಾಧಿಕಾರಿಯಾಗಿ ಹಾಗೂ ಶಿರಹಟ್ಟಿ ಪಟ್ಟಣ ಪಂಚಾಯಿತಿಗೆ ತಹಸೀಲ್ದಾರ ಕೆ.ರಾಘವೇಂದ್ರ ರಾವು ಆಡಳಿತಾಧಿಕಾರಿಗಳಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಇದೀಗ ಗ್ರಾಮ ಪಂಚಾಯಿತಿಗಳಲ್ಲೂ ಸಹ ತಾಲೂಕಾ ಮಟ್ಟದ ಅಧಿಕಾರಿಗಳೇ ಆಡಳಿತಾಧಿಕಾರಿಗಳಾಗಿ ನೇಮಕವಾಗಿದ್ದು, ಅಲ್ಲಿಯೂ ಸಹ ಅಧಿಕಾರಿಗಳೇ ನಿರ್ಣಾಯಕ ಪಾತ್ರ ವಹಿಸಲಿದ್ದಾರೆ.

ಗ್ರಾಮೀಣ ಪ್ರದೇಶಗಳಲ್ಲಿ ವಿವಿಧ ಕೆಲಸ-ಕಾರ್ಯಗಳಿಗೆ ಗ್ರಾ.ಪಂಗಳಿಗೆ ಆಗಮಿಸುವ ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸುವುದಕ್ಕೆ ಗ್ರಾ.ಪಂ ನೋಡಲ್ ಅಧಿಕಾರಿಗಳು ಸ್ಪಂದಿಸುವಂತಾಗಬೇಕು. ತಮ್ಮ ಅಧಿಕಾರ ಮತ್ತು ಕರ್ತವ್ಯವನ್ನು ಸಮರ್ಪಕವಾಗಿ ನಿರ್ವಹಿಸುವ ಮೂಲಕ ಸಾರ್ವಜನಿಕರಿಗೆ ಸರಕಾರದ ಸಹಾಯ ಸೌಲಭ್ಯ ಸಿಗುವಂತಾಗಲಿ ಎಂದು ಸಾರ್ವಜನಿಕರು ಆಶಯ ವ್ಯಕ್ತಪಡಿಸಿದ್ದಾರೆ.

# ಫೆ.1ರಂದು ಗದಗನಲ್ಲಿ ನಡೆದ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಕಾರ್ಯಕಾರಿ ಸಮಿತಿಯ ಸಭೆಯ ದೃಶ್ಯಗಳು...































VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka